ಸಂಪುಟ 01 | ಸಂಚಿಕೆ 191 ಮಂಗಳವಾರ 15 ಸೆಪ್ಟೆಂಬರ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH
ಕನ್ನಡ ದಿನ ಪತ್ರಿಕೆ
REGIONAL KANNADA DAILY MORNING

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

ಈ ದಿನದ ವಿಶೇಷ

1) Engineers' Day (India) ಭಾರತದಲ್ಲಿ ಪ್ರತಿವರ್ಷ ಸೆಪ್ಟೆಂಬರ್ 15ರಂದು ಆಚರಿಸಲಾಗುತ್ತದೆ. ಇದು ಖ್ಯಾತ ಇಂಜಿನಿಯರ್ ಸರ್ ಎಂ. ವಿಶ್ವೇಶ್ವರಯ್ಯ ಅವರ ಜನ್ಮದಿನದ ಸ್ಮರಣಾರ್ಥ ಆಚರಿಸಲಾಗುತ್ತದೆ.

2) International Day of Democracy ಪ್ರಜಾಪ್ರಭುತ್ವದ ಮಹತ್ವ, ಜನರ ಭಾಗವಹಿಸುವಿಕೆ ಮತ್ತು ಮಾನವ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸುವ ದಿನ.

3) World Afro Day ಆಫ್ರಿಕನ್ ಮೂಲದ ಜನರ ನೈಸರ್ಗಿಕ ಕೂದಲಿನ ವೈವಿಧ್ಯತೆ ಮತ್ತು ಸಾಂಸ್ಕೃತಿಕ ಗುರುತನ್ನು ಗೌರವಿಸುವ ದಿನ.

ಸುಭಾಷಿತ

ಮುಂದಿರುವ ಹುಣ್ಣಿಮೆಯ ಸೊಬಗನ್ನು
ಸವಿಯದೆ ಮುಂಬರಲಿರುವ
ಅಮಾವಾಸ್ಯೆಯನ್ನು ನೆನೆದು ಕೊರಗುವುದು
ವಿವೇಕವೆನ್ನಿಸದು.

ಕೆ.ಎಸ್. ನಿಸಾರ್ ಅಹಮದ್

ಗಣೇಶ ಚತುರ್ಥಿ ಸಂಭ್ರಮದಲ್ಲಿ ಡಿ.ಕೆ. ಶಿವಕುಮಾರ್

ತಂದೆಯ ಸಮಾಧಿಗೆ ತೆರಳಿ ಪೂಜೆ ಸಲ್ಲಿಕೆ ಭಕ್ತಿಭಾವದ ಸುಂದರ ಕ್ಷಣಗಳಿಗೆ ಸಾಕ್ಷಿಯಾದ ಕನಕಪುರ


❑ ನೈಜ್ಯ ದೆಸೆ ನ್ಯೂಸ್

ಕನಕಪುರ,: ಗಣೇಶ ಚತುರ್ಥಿ ಹಬ್ಬದ ಅಂಗವಾಗಿ ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರಾದ ಶ್ರೀ ಡಿ.ಕೆ. ಶಿವಕುಮಾರ್ ಅವರು ಇಂದು ಕನಕಪುರದಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಿ, ಗಣೇಶನಿಗೆ ವಿಶೇಷ ಪೂಜೆ ಸಲ್ಲಿಸಿದರು. ಹಬ್ಬದ ಸಂಭ್ರಮದ ನಡುವೆ ಕುಟುಂಬಸ್ಥರು, ಅಭಿಮಾನಿಗಳು ಹಾಗೂ ಸ್ಥಳೀಯ ಮುಖಂಡರೊಂದಿಗೆ ಆತ್ಮೀಯವಾಗಿ ಬೆರೆತು ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು.

ಗಣೇಶ ಚತುರ್ಥಿಯ ಪವಿತ್ರ ಸಂದರ್ಭದಲ್ಲಿ ವಿಘ್ನವಿನಾಶಕ ಶ್ರೀ ಗಣೇಶನಿಗೆ ಪೂಜೆ ಸಲ್ಲಿಸಿ, ನಾಡಿನ ಜನತೆಗೆ ಸುಖ, ಶಾಂತಿ, ಸಮೃದ್ಧಿ ಹಾಗೂ ಉತ್ತಮ ಮಳೆ-ಬೆಳೆ ಕರುಣಿಸಲಿ ಎಂದು ಪ್ರಾರ್ಥಿಸಿದರು. ಈ ಸಂದರ್ಭದಲ್ಲಿ ಭಕ್ತಿಭಾವದಿಂದ ಗಣೇಶನ ಆರಾಧನೆ ಮಾಡಿದ ಕ್ಷಣಗಳು ಎಲ್ಲರ ಗಮನ ಸೆಳೆದವು.

ತಂದೆಯ ಸಮಾಧಿಗೆ ತೆರಳಿ ಪೂಜೆ ಸಲ್ಲಿಕೆ

ಇದೇ ಸಂದರ್ಭದಲ್ಲಿ ಶ್ರೀ ಡಿ.ಕೆ. ಶಿವಕುಮಾರ್ ಅವರು ತಮ್ಮ ತಂದೆಯ ಸಮಾಧಿಗೆ ತೆರಳಿ ಪೂಜೆ ಸಲ್ಲಿಸಿ, ಗೌರವ ನಮನಗಳನ್ನು ಸಲ್ಲಿಸಿದರು. ತಂದೆಯ ಸ್ಮರಣೆಯಲ್ಲಿ ಕೆಲಕಾಲ ಭಾವುಕರಾಗಿ ನಿಂತು, ಅವರ ಆಶೀರ್ವಾದವನ್ನು ಸ್ಮರಿಸಿಕೊಂಡರು. ತಂದೆಯ ಸಮಾಧಿಗೆ ಪೂಜೆ ಸಲ್ಲಿಸಿದ ಈ ಕ್ಷಣಗಳು ಅತ್ಯಂತ ಭಾವನಾತ್ಮಕವಾಗಿದ್ದು,





ಕುಟುಂಬದ ಮೇಲಿನ ಅವರ ಪ್ರೀತಿ, ಗೌರವ ಮತ್ತು ಬಾಂಧವ್ಯವನ್ನು ಪ್ರತಿಬಿಂಬಿಸುವಂತಿ-ದ್ದವು. ಸಮಾಧಿ ಸ್ಥಳದಲ್ಲಿ ಪೂಜೆ ಸಲ್ಲಿಸಿ, ಕುಟುಂಬದ ಹಿರಿಯರ ಆಶೀರ್ವಾದ ಹಾಗೂ ಮಾರ್ಗದರ್ಶನವನ್ನು ಸ್ಮರಿಸಿಕೊಂಡರು.

ಹಬ್ಬದ ಸಂಭ್ರಮದ ನಡುವೆ ಜನರೊಂದಿಗೆ ಆತ್ಮೀಯತೆ





ಗಣೇಶ ಚತುರ್ಥಿ ಹಿನ್ನೆಲೆಯಲ್ಲಿ ಕನಕಪುರದಲ್ಲಿ ಹಬ್ಬದ ವಾತಾವರಣ ಮನೆ ಮಾಡಿತ್ತು. ವಿವಿಧೆಡೆ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ವಿಶೇಷ ಪೂಜೆ, ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ಡಿ.ಕೆ. ಶಿವಕುಮಾರ್ ಅವರು ಭಕ್ತರೊಂದಿಗೆ ಬೆರೆತು ಗಣೇಶನ ದರ್ಶನ ಪಡೆದು, ಹಬ್ಬದ ಶುಭಾಶಯಗಳನ್ನು ಕೋರಿದರು.

ಹಬ್ಬದ ಧಾರ್ಮಿಕ ಸಂಭ್ರಮದ ಜೊತೆಗೆ ತಂದೆಯ ಸಮಾಧಿಗೆ ತೆರಳಿ ಪೂಜೆ ಸಲ್ಲಿಸಿರುವುದು ಇಂದಿನ ಪ್ರವಾಸಕ್ಕೆ ವಿಶೇಷ ಅರ್ಥವನ್ನು ನೀಡಿತು. ಒಂದು ಕಡೆ ವಿಘ್ನವಿನಾಶಕ ಗಣೇಶನಿಗೆ ಭಕ್ತಿಯಿಂದ ಪೂಜೆ ಸಲ್ಲಿಸಿದರೆ, ಮತ್ತೊಂದೆಡೆ ತಂದೆಯ ಸ್ಮರಣೆಯಲ್ಲಿ ಗೌರವ ನಮನ ಸಲ್ಲಿಸುವ ಮೂಲಕ ಕುಟುಂಬ ಮೌಲ್ಯಗಳಿಗೆ ಮಹತ್ವ ನೀಡಿದರು.

ಜನಸಂಪರ್ಕಕ್ಕೂ ಆದ್ಯತೆ


ಪ್ರವಾಸದ ವೇಳೆ ವಿವಿಧ ಸ್ಥಳಗಳಿಗೆ ಭೇಟಿ ನೀಡಿದ ಅವರು ಸಾರ್ವಜನಿಕರು, ಕಾರ್ಯಕರ್ತರು, ವಿದ್ಯಾರ್ಥಿಗಳು ಹಾಗೂ ಸ್ಥಳೀಯ ಮುಖಂಡರೊಂದಿಗೆ ಆತ್ಮೀಯವಾಗಿ ಸಂವಾದ ನಡೆಸಿದರು. ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ, ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಒಟ್ಟಿನಲ್ಲಿ, ಗಣೇಶ ಚತುರ್ಥಿಯ ಭಕ್ತಿ ಮತ್ತು ಸಂಭ್ರಮ, ತಂದೆಯ ಸಮಾಧಿಗೆ ಸಲ್ಲಿಸಿದ ಗೌರವಪೂರ್ವಕ ನಮನ ಹಾಗೂ ಜನರೊಂದಿಗೆ ನಡೆಸಿದ ಆತ್ಮೀಯ ಸಂವಾದದಿಂದ ಶ್ರೀ ಡಿ.ಕೆ. ಶಿವಕುಮಾರ್ ಅವರ ಇಂದಿನ ಕನಕಪುರ ಪ್ರವಾಸ ವಿಶೇಷವಾಗಿತ್ತು. ಭಕ್ತಿ, ಕುಟುಂಬದ ಬಾಂಧವ್ಯ ಹಾಗೂ ಜನಸೇವೆಯ ಸಂಗಮವಾಗಿ ಇಂದಿನ ಸುಂದರ ಕ್ಷಣಗಳು ಮೂಡಿಬಂದವು.

ಗಣೇಶೋತ್ಸವ ಆಚರಣೆಗೆ ಗೋಗರೆಯಬೇಕೆ

❑ ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ನಮ್ಮದೇ ನೆಲದಲ್ಲಿ ಅದರಲ್ಲೂ ಸಂಸ್ಕೃತಿಗೆ ಹೆಸರಾದ ಕನ್ನಡ ನಾಡಿನಲ್ಲಿ ಗಣೇಶೋತ್ಸವ ಆಚರಣೆಗೆ ಹಿಂದೂಗಳು ಗೋಗರೆಯಬೇಕೇ? ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಕಿಡಿ ಕಾರಿದ್ದಾರೆ.




ರಾಜ್ಯದಲ್ಲಿ ಗಣೇಶೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲು ಹಿಂದೂಗಳು ಹಿಂದೂ-ಮುಂದು ನೋಡುವಂತಹ ಪರಿಸ್ಥಿತಿ ತಲೆದೋರಿರುವುದು ನಿಜಕ್ಕೂ ದುರ್ದೈವದ ಸಂಗತಿ ಎಂದು ಖಂಡಿಸಿದ್ದಾರೆ. ಟಿ.ನರಸೀಪುರ ಇನ್ಸ್‌ಪೆಕ್ಟರ್, ಗಣೇಶ ಸಮಿತಿ ಯುವಕ-ರಿಗೆ ಬಹಿರಂಗ ಧಮ್ಕಿ ಹಾಕಿದ್ದಾರೆ. ಇದಕ್ಕೆ ಕುಮ್ಮಕ್ಕು ನೀಡಿದವರು ಯಾರು? ಇದು ಗೃಹ ಸಚಿವರು ನೀಡಿದ ಅಧಿಕಾರವೋ ಅಥವಾ ಸಿಎಂ ಡಿ.ಕೆ.ಶಿವಕುಮಾರ್ ಹೊರಡಿಸಿದ ತುಷ್ಟೀಕರಣ ರಾಜಕಾರಣದ ಫರ್ಮಾನಾ? ಎಂದು ಜೋಶಿ ಪ್ರಶ್ನಿಸಿದ್ದಾರೆ. ಸರ್ವ ಸಮಾನತೆಯಿಂದ ಕಾನೂನು ಸುವ್ಯವಸ್ಥೆ ಕಾಪಾಡಬೇಕಾದ ಅಧಿಕಾರಿಯೇ ಹೀಗೆ ಒಂದು ಸಮುದಾಯದ ಏಜೆಂಟ್‌ನಂತೆ ವರ್ತಿಸಿ, ಬೆದರಿಸುತ್ತಿರುವುದು ಅಕ್ಷಮ್ಯ ಅಪರಾಧ ಎಂದು ಆಕ್ಷೇಪಿಸಿದ್ದಾರೆ.ನ್ನು ತಕ್ಷಣವೇ ಸೇವೆಯಿಂದ ಅಮಾನತು ಮಾಡಬೇಕು ಎಂದು ಆಗ್ರಹಿಸಿದ್ದಾರೆ.

ಜೆಡಿಎಸ್-ಬಿಜೆಪಿ ಮುಖಂಡರು, ಕಾರ್ಯಕರ್ತರು ಕಾಂಗ್ರೆಸ್ ಸೇರ್ಪಡೆ; ಬಸನಗೌಡ ಬಾದರ್ಲಿ ನೇತೃತ್ವದಲ್ಲಿ ಸೇರ್ಪಡೆ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ತಾಲೂಕಿನ ಗಾಂಧಿನಗರ ಗ್ರಾಮದಲ್ಲಿ ಕಾಂಗ್ರೆಸ್ ಪಕ್ಷದ ಸಂಘಟನೆಗೆ ಮತ್ತಷ್ಟು ಬಲ ದೊರೆತಿದ್ದು, ಜೆಡಿಎಸ್ ಹಾಗೂ ಬಿಜೆಪಿ ಪಕ್ಷಗಳ ಹಲವು ಮುಖಂಡರು ಮತ್ತು ಕಾರ್ಯಕರ್ತರು ತಮ್ಮ ಪಕ್ಷಗಳನ್ನು ತೊರೆದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.

ಕಾಂಗ್ರೆಸ್ ಪಕ್ಷದ ತತ್ವ?ಸಿದ್ಧಾಂತಗಳು, ಅಭಿವೃದ್ಧಿಪರ ಚಿಂತನೆ ಹಾಗೂ ಜನಪರ ಕಾರ್ಯಕ್ರಮಗಳನ್ನು ಮೆಚ್ಚಿ, ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ ಅವರ ನೇತೃತ್ವದಲ್ಲಿ ನೂತನ ಮುಖಂಡರು ಹಾಗೂ ಕಾರ್ಯಕರ್ತರು ಕಾಂಗ್ರೆಸ್ ಪಕ್ಷದ ಸೇರ್ಪಡೆಗೊಂಡರು. ಸೇರ್ಪಡೆ ಕಾರ್ಯಕ್ರಮದಲ್ಲಿ ನೂತನ ಕಾರ್ಯಕರ್ತರನ್ನು ಕಾಂಗ್ರೆಸ್ ಪಕ್ಷದ ಶಾಲು ಹೊದಿಸಿ ಆತ್ಮೀಯವಾಗಿ ಬರಮಾಡಿಕೊಂಡ



ಬಸನಗೌಡ ಬಾದರ್ಲಿ ಅವರು, "ಕಾಂಗ್ರೆಸ್ ಪಕ್ಷದ ಮೇಲೆ ವಿಶ್ವಾಸವಿಟ್ಟು ನಮ್ಮೊಂದಿಗೆ ಕೈಜೋಡಿಸಿರುವ ಪ್ರತಿಯೊಬ್ಬ ಮುಖಂಡರು ಮತ್ತು ಕಾರ್ಯಕರ್ತರನ್ನು ಹೃದಯಪೂರ್ವಕವಾಗಿ ಸ್ವಾಗತಿಸುತ್ತೇನೆ" ಎಂದರು.

ಕಾರ್ಯಗಳ ಮೇಲೆ ವಿಶ್ವಾಸ

ಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ. ಶಿವಕುಮಾರ್ ಅವರ ನಾಯಕತ್ವ, ಅಭಿವೃದ್ಧಿಯ ಕಾಯಕ ಹಾಗೂ ಜನಪರ ಕಾರ್ಯಗಳ ಮೇಲೆ ವಿಶ್ವಾಸವಿಟ್ಟು ಗಾಂಧಿನಗರ ಗ್ರಾಮದ ಜೆಡಿಎಸ್ ಹಾಗೂ ಬಿಜೆಪಿ ಮುಖಂಡರು ಕಾಂಗ್ರೆಸ್ ಪಕ್ಷವನ್ನು ಸೇರುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದು ಬಸನಗೌಡ ಬಾದರ್ಲಿ ಹೇಳಿದರು.

ರಾಜ್ಯದಲ್ಲಿ ಅಭಿವೃದ್ಧಿಗೆ ಆದ್ಯತೆ ನೀಡುವ ಹಾಗೂ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಆಡಳಿತದ ಪರವಾಗಿ ಕಾಂಗ್ರೆಸ್ ಪಕ್ಷ ನಿರಂತರವಾಗಿ ಕೆಲಸ ಮಾಡುತ್ತಿದೆ. ಸರ್ಕಾರದ ಯೋಜನೆಗಳು ಮತ್ತು ಕಾರ್ಯಕ್ರಮಗಳು ಸಮಾಜದ ವಿವಿಧ ವರ್ಗಗಳ ಜನರಿಗೆ ತಲುಪುವಂತೆ ಪಕ್ಷದ ಕಾರ್ಯಕರ್ತರು ಜನರೊಂದಿಗೆ ನಿಕಟ ಸಂಪರ್ಕದಲ್ಲಿದ್ದು ಕೆಲಸ ಮಾಡಬೇಕು ಎಂದು ಹೇಳಿದರು.

ಕಾಂಗ್ರೆಸ್ ಕುಟುಂಬಕ್ಕೆ ಆತ್ಮೀಯ ಸ್ವಾಗತ

"ಪಕ್ಷಕ್ಕೆ ಸೇರ್ಪಡೆಯಾದವರು ಕೇವಲ ಹೊಸ ಸದಸ್ಯರಲ್ಲ; ಅವರು ಕಾಂಗ್ರೆಸ್ ಕುಟುಂಬದ ಸದಸ್ಯರು. ಅವರ ಅನುಭವ, ಸಲಹೆ ಮತ್ತು ಸಂಘಟನಾ ಶಕ್ತಿ ಪಕ್ಷಕ್ಕೆ ಮತ್ತಷ್ಟು ಬಲ ನೀಡಲಿದೆ. ಎಲ್ಲರನ್ನೂ ಸಮಾನವಾಗಿ ಗೌರವಿಸಿ, ಒಗ್ಗಟ್ಟಿನಿಂದ ಸಂಘಟನೆ ಕಟ್ಟುವುದು ನಮ್ಮ ಆದ್ಯತೆಯಾಗಿದೆ" ಎಂದು ಬಸನಗೌಡ ಬಾದರ್ಲಿ ಹೇಳಿದರು.

ಗ್ರಾಮೀಣ ಭಾಗದಲ್ಲಿ ಕಾಂಗ್ರೆಸ್ ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬ ಕಾರ್ಯಕರ್ತರೂ ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು. ಜನರ ಸಮಸ್ಯೆಗಳನ್ನು ಆಲಿಸಿ, ಅವುಗಳಿಗೆ ಪರಿಹಾರ ಕಂಡುಕೊಳ್ಳಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದರು.

ಒಗ್ಗಟ್ಟಾಗಿ ಪಕ್ಷವನ್ನು ಬಲಪಡಿಸೋಣ

"ಕಾಂಗ್ರೆಸ್ ಪಕ್ಷದ ಬಲ ಕೇವಲ ಮುಖಂಡರಲ್ಲಿ ಇಲ್ಲ; ಸಾಮಾನ್ಯ ಕಾರ್ಯಕರ್ತರ ಪರಿಶ್ರಮದಲ್ಲಿದೆ. ಪಕ್ಷದ ಪ್ರತಿಯೊಬ್ಬ ಕಾರ್ಯಕರ್ತನ ಶ್ರಮವನ್ನು ಗೌರವಿಸಿ, ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಂಘಟನೆ ಬಲಪಡಿಸಲಾಗುವುದು. ಗಾಂಧಿನಗರ ಸೇರಿದಂತೆ ಸಿಂಧನೂರು ತಾಲೂಕಿನಾದ್ಯಂತ ಕಾಂಗ್ರೆಸ್ ಪಕ್ಷದ ಸಂಘಟನೆಯನ್ನು ಮತ್ತಷ್ಟು ಸದೃಢಗೊಳಿಸುವ ನಿಟ್ಟಿನಲ್ಲಿ ಎಲ್ಲರೂ ಒಗ್ಗಟ್ಟಾಗಿ ಕೆಲಸ ಮಾಡಬೇಕು" ಎಂದು ಕರೆ ನೀಡಿದರು.

ರಾಜ್ಯಮಟ್ಟದ ಚದುರಂಗ ಸ್ಪರ್ಧೆಗೆ ರಾಹುಲ್ ಆಯ್ಕೆ

ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿಯ ಸಾಧನೆಗೆ ಮೆಚ್ಚುಗೆ

❑ ನೈಜ್ಯ ದೆಸೆ ನ್ಯೂಸ್

ರಾಯಚೂರು: ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಆ.27ರಂದು ನಡೆದ ಜಿಲ್ಲಾ ಮಟ್ಟದ ಚದುರಂಗ ಸ್ಪರ್ಧೆಯಲ್ಲಿ ಅರಕೇರಾ ತಾಲೂಕಿನ ಆಲ್ಕೋಡ್ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆ385ರ 10ನೇ ತರಗತಿ ವಿದ್ಯಾರ್ಥಿ ಕುಮಾರ್ ರಾಹುಲ್, ತಂದೆ ಪತ್ತೆಪ್ಪ ಅವರು ಭಾಗವಹಿಸಿ, ಗಮನಾರ್ಹ ಪ್ರದರ್ಶನ ನೀಡಿ ರಾಜ್ಯಮಟ್ಟದ ಚದುರಂಗ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ಚಿಕ್ಕ ವಯಸ್ಸಿನಲ್ಲಿಯೇ ಚದುರಂಗ ಕ್ರೀಡೆಯ ಬಗ್ಗೆ ಆಸಕ್ತಿ ಬೆಳೆಸಿಕೊಂಡಿರುವ ರಾಹುಲ್, ಸ್ಪರ್ಧೆಯಲ್ಲಿ ಏಕಾಗ್ರತೆ, ಸಮಯಪ್ರಜ್ಞೆ ಹಾಗೂ ತಂತ್ರಗಾರಿಕೆಯನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ಉತ್ತಮ ಪ್ರದರ್ಶನ ನೀಡಿದ್ದಾರೆ. ಅವರ



ಈ ಸಾಧನೆಯು ಶಾಲೆಯ ಕ್ರೀಡಾ ಕ್ಷೇತ್ರಕ್ಕೆ ಮತ್ತೊಂದು ಹೆಮ್ಮೆಯ ಗರಿ ಮೂಡಿಸಿದೆ. ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುವ ರಾಹುಲ್ ಅವರ ಸಾಧನೆಗೆ ಶಾಲೆಯ ಪ್ರಾಂಶುಪಾಲರು, ದೈಹಿಕ ಶಿಕ್ಷಣ ಶಿಕ್ಷಕರು ಸೇರಿದಂತೆ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ.

ವಿದ್ಯಾರ್ಥಿಗಳಲ್ಲಿ ಶಿಕ್ಷಣದ ಜೊತೆಗೆ ಕ್ರೀಡಾ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವುದು ಅತ್ಯಂತ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ರಾಹುಲ್ ಅವರ ಸಾಧನೆ ಇತರ ವಿದ್ಯಾರ್ಥಿಗಳಿಗೂ ಪ್ರೇರಣೆಯಾಗಲಿದೆ ಎಂದು ಶಾಲೆಯ ಶಿಕ್ಷಕರು ಅಭಿಪ್ರಾಯಪಟ್ಟಿದ್ದಾರೆ. ರಾಹುಲ್ ಅವರು ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಮತ್ತಷ್ಟು ಉತ್ತಮ ಪ್ರದರ್ಶನ ನೀಡಿ ವಿಜೇತರಾಗಿ, ಮುಂದಿನ ದಿನಗಳಲ್ಲಿ ರಾಷ್ಟ್ರಮಟ್ಟ ಹಾಗೂ ಅಂತರಾಷ್ಟ್ರೀಯ ಮಟ್ಟದ ಚದುರಂಗ ಸ್ಪರ್ಧೆಗಳಲ್ಲಿ ಭಾಗವಹಿಸಿ ಯಶಸ್ಸು ಸಾಧಿಸಲಿ. ಆ ಮೂಲಕ ತಮ್ಮ ಶಾಲೆ, ತಂದೆ-ತಾಯಿ ಹಾಗೂ ಜಿಲ್ಲೆಯ ಕೀರ್ತಿಯನ್ನು ಮತ್ತಷ್ಟು ಹೆಚ್ಚಿಸಲಿ ಎಂದು ಶಾಲೆಯ ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ಹಾರೈಸಿದ್ದಾರೆ. ರಾಹುಲ್ ಅವರ ಮುಂದಿನ ಎಲ್ಲಾ ಕ್ರೀಡಾ ಪ್ರಯತ್ನಗಳಿಗೆ ಶಾಲೆಯ ಸಮಸ್ತ ಸಿಬ್ಬಂದಿ ಶುಭ ಹಾರೈಸಿದ್ದಾರೆ.

ಗುಡೂರು ಎಸ್‌ಬಿ ಗ್ರಾಮದಲ್ಲಿ ಗಣೇಶೋತ್ಸವದ ಸಂಭ್ರಮ

❑ ನೈಜ್ಯ ದೆಸೆ ನ್ಯೂಸ್

ಇಲಕಲ್: ಸಮೀಪದ ಗುಡೂರು ಎಸ್‌ಬಿ ಗ್ರಾಮದ ಗಜಾನನ ಮಿತ್ರ ಮಂಡಳಿ ವತಿಯಿಂದ ಗಣೇಶೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.

ಟ್ರ್ಯಾಕ್ಟರ್ ಮೂಲಕ ಗಣೇಶನ ಮೂರ್ತಿಯನ್ನು ಭವ್ಯ ಮೆರವಣಿಗೆಯಲ್ಲಿ ಕೊಂಡೊಯ್ದು ಶ್ರೀ ಬೈಲ ಹನುಮಂತೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು. ಬಳಿಕ ಗ್ರಾಮಕ್ಕೆ ತೆರಳಿದ ಮೆರವಣಿಗೆಯಲ್ಲಿ ಯುವಕರು ಕೇಸರಿ ಶಾಲು ಧರಿಸಿ, ಹಣೆಗೆ ಪಟ್ಟಿ ಕಟ್ಟಿಕೊಂಡು ಉತ್ಸಾಹದಿಂದ ಪಾಲ್ಗೊಂಡರು.

ಮೆರವಣಿಗೆಯುದ್ದಕ್ಕೂ ಗ್ರಾಮದಲ್ಲಿ ಸಿಳ್ಳೆ, ಕೇಕೆ ಹಾಗೂ "ಗಣಪತಿ



ಬಪ್ಪಾ ಮೋರಯಾ" ಎಂಬ ಘೋಷಣೆಗಳನ್ನು ಮೊಳಗಿಸುತ್ತಾ ಸಂಭ್ರಮಿಸಿದರು. ನಂತರ ಗ್ರಾಮದಲ್ಲಿ ಗಣೇಶನ ಮೂರ್ತಿಯನ್ನು ಪ್ರತಿಷ್ಠಾಪಿಸಿ ವಿಧಿವಿಧಾನಗಳೊಂದಿಗೆ ಪೂಜೆ ನೆರವೇ-ರಿಸಲಾಯಿತು. ಗಣೇಶೋತ್ಸವದ ಅಂಗವಾಗಿ ಭಕ್ತರಿಗೆ ಅನ್ನ ಸಂತರ್ಪಣೆ ಏರ್ಪಡಿಸಲಾಗಿದ್ದು, ಗ್ರಾಮಸ್ಥರು ಹಾಗೂ ಗಜಾನನ ಮಿತ್ರ ಮಂಡಳಿ ಸದಸ್ಯರು ಉತ್ಸಾಹದಿಂದ ಭಾಗವಹಿಸಿದ್ದರು.

ಕಾರುಣ್ಯಾಶ್ರಮದಲ್ಲಿ ಗಾಂಧಿನಗರದ ಕೋಮಟ್ಲಪಲ್ಲಿ ಕುಟುಂಬದ ದಿ. ವರಲಕ್ಷ್ಮಿ ಅವರ ಪುಣ್ಯಾರಾಧನೆ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ತಾಲೂಕಿನ ಗಾಂಧಿನಗರದ ಕೋಮಟ್ಲಪಲ್ಲಿ ಕುಟುಂಬದ ಹಿರಿಯರಾದ ದಿ. ವರಲಕ್ಷ್ಮಿ ಅವರ ಪ್ರಥಮ ವರ್ಷದ ಪುಣ್ಯಾರಾಧನೆ ಸಮಾರಂಭ ಕಾರ್ಯಕ್ರಮವನ್ನು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಇಡೀ ದಿನ ವಿವಿಧ ಬಗೆಯ ಮಹಾಪ್ರಸಾದ ಸೇವೆ ಹಾಗೂ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ ಅರ್ಥಪೂರ್ಣವಾಗಿ ನೆರವೇರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ದಿ. ಕೋಮಟ್ಲ ಪಲ್ಲಿ ವರಲಕ್ಷ್ಮೀ ಅವರ ಭಾವಚಿತ್ರಕ್ಕೆ ವಿಶೇಷ ಪೂಜೆಯನ್ನು ಸಲ್ಲಿಸಿ ಆಶ್ರಯದಾತರುಗಳು ಪ್ರಾರ್ಥಿಸಿದರು. ನಂತರ ಆಶ್ರಮದ ಕಾರ್ಯಾಧ್ಯಕ್ಷರಾದ



ಡಾ.ಚನ್ನಬಸವ ಸ್ವಾಮಿ ಹಿರೇಮಠ ಮಾತನಾಡಿ ಆಶ್ರಮದ ನಿರಂತರ ಮಾರ್ಗದರ್ಶಕರು ಮತ್ತು ನಮ್ಮ ಕೋಮಟ್ಲಪಲ್ಲಿ ಕುಟುಂಬದ ಹಿರಿಯರಾದ ನಮ್ಮ ಸೇವೆಗೆ ಸ್ಫೂರ್ತಿಯಾದ ಕೆ. ಗಣಪತಿ ವರಲಕ್ಷ್ಮಿ ಅಮ್ಮನವರ ಸುಪುತ್ರರಾದ ನಮ್ಮ ಅವರು ನಾವು ಕುಷ್ಟಗಿ ರಸ್ತೆಯ ಕಟ್ಟಡದಿಂದ ಒಳಬಳ್ಳಾರಿ ರಸ್ತೆಗೆ ನಿರ್ಮಿಸುತ್ತಿದ್ದ ಕಟ್ಟಡಕ್ಕಾಗಿ ಸುಮಾರು ಐವತ್ತು ಚೀಲ ಸಿಮೆಂಟ್ ಕಳುಹಿಸುವ ಮೂಲಕ ಅಂದ ಅನಾಥರ ಬಾಳಿಗೆ ಬೆಳಕಾಗಿದ್ದರು. ಮತ್ತು ಹೋದ ವರ್ಷ ಆಶ್ರಮಕ್ಕೆ ಉತ್ತಮ ಗುಣಮಟ್ಟದ ಫ್ರಿಡ್ಜ್ ವಿತರಿಸುವ ಕಾರ್ಯ ಮಾಡಿದ್ದರು. ಇಂತಹ ಪುಣ್ಯಾತ್ಮರು ಇರುವುದ-ರಿಂದ ನಾವು ಸೇವೆ ಮಾಡಲು ಅನುಕೂಲವಾಗಿದೆ.

ನಿರಂತರವಾಗಿ ಈ ಸಂಸ್ಥೆ ಹುಟ್ಟಿದಾಗಲಿಂದಲೂ ಸಹ ಕೆ. ಗಣಪತಿಯವರು ಕಾರುಣ್ಯ ಆಶ್ರಮದಲ್ಲಿರುವ ಎಲ್ಲಾ ಹಿರಿಯರು ಕೂಡ ನಮ್ಮ ತಂದೆ ತಾಯಿಗಳ ಸಮಾನರು ಮತ್ತು ವಯಸ್ಕರ ಬುದ್ಧಿಮಾಂದ್ಯರು ಮಕ್ಕಳು ಹಾಗೂ ಸಹೋದರ ಸಹೋದರಿಯರ ಸಮಾನರು ಎನ್ನುವ ಮನೋಭಾವನೆಯನ್ನು ಇಟ್ಟುಕೊಂಡಿರುವ ಅವರ ಸೇವೆ ಕಾರುಣ್ಯ ಆಶ್ರಮಕ್ಕೆ ಅಭೂತಪೂರ್ವವಾಗಿದೆ.

ಗಾಂಧಿನಗರದ ಕೋಮಟ್ಲಪಲ್ಲಿ ಕುಟುಂಬದ ಸೇವೆ ಕಾರುಣ್ಯಾಶ್ರಮಕ್ಕೆ ಅಪಾರವಾಗಿದೆ ಈ ಕುಟುಂಬಕ್ಕೆ ವರಲಕ್ಷ್ಮಿ ಅಮ್ಮನವರ ಅಗಲಿಕೆ ಹೋಗಿಸುವಂತಹ ಶಕ್ತಿಯನ್ನು ಕರುಣಿಸಿ ಇನ್ನು ಅನೇಕ ಹಲವಾರು ಜನಪರ ಸಮಾಜಪರ ಕಾರ್ಯಗಳನ್ನು ಮಾಡುವಂತ ಶಕ್ತಿಯನ್ನು ಕೆ.ಗಣಪತಿ ಕುಟುಂಬಕ್ಕೆ ಭಗವಂತ ಕರುಣಿಸಲಿ ಎನ್ನುವುದು ಕಾರುಣ್ಯ ಕುಟುಂಬದ ವಿಶೇಷ ಪ್ರಾರ್ಥನೆಯಾಗಿದೆ ಎಂದು ಮಾತನಾಡಿ ಆಶ್ರಮದ ವತಿಯಿಂದ ಕೊಮಟ್ಲಪಲ್ಲಿ ಕುಟುಂಬಕ್ಕೆ ಧನ್ಯವಾದಗಳನ್ನು ಅರ್ಪಿಸಿದರು. ಈ ಕಾರ್ಯಕ್ರಮದಲ್ಲಿ ಕೋಮಟ್ಲಪಲ್ಲಿ ಕುಟುಂಬದ ಹಿರಿಯರಾದ ಶ್ರೀರಾಮ ಮೂರ್ತಿ. ಕೆ.ಗಣಪತಿ. ಕೆ.ಹೈಮಾ ಪಾರ್ವತಿ. ಪದ್ಮಾಗಂ. ಬ್ರಹ್ಮಾ ನಂದ. ಕೀರ್ತನ ಗಂ. ಸಾಯಿ ಮನಿಶ್. ಮಾನಸ ಹಾಗೂ ಆಶ್ರಮದ ಸದಸ್ಯರಾದ ಸುಜಾತ ಹಿರೇಮಠ. ಸಿಬ್ಬಂದಿಗಳಾದ ಸಿದ್ದಯ್ಯ ಸ್ವಾಮಿ.ಮರಿಯಪ್ಪ. ಜ್ಯೋತಿ ಮಹಾಂತೇಶ ದೋಟಿಹಾಳ. ಶರಣು ಸ್ವಾಮಿ. ಬಸವ ಸ್ವಾಮಿ. ಅನೇಕರು ಉಪಸ್ಥಿತರಿದ್ದರು

ಸಾಹಿತ್ಯ ಸಿಂಚನ

ಕಾಲ ನಿಂತ ಕ್ಷಣ

ಕಾಲದ ಓಟವು ನಿಂತಂತೆ ತೋರಿ,
ಒಂದು ಕ್ಷಣ ಮನಸು ಮೌನದಲ್ಲಿ ತೇಲಿ.
ಕನಸುಗಳ ಲೋಕದ ಬಾಗಿಲು ತೆರೆದು,
ನೆನಪುಗಳ ದಾರಿಯಲ್ಲಿ ಹೆಜ್ಜೆ ಇಟ್ಟಿತು.

ಗಡಿಯಾರದ ಮುಳ್ಳುಗಳು ನಿಶ್ಚಲವಾದವು,
ಮೌನದೊಳಗೆ ಸಾವಿರ ಮಾತುಗಳಾದವು.
ಹಾದುಹೋದ ಕ್ಷಣಗಳು ಕಣ್ಣ ಮುಂದೆ ಬಂದು,
ಹೃದಯದೊಳಗೆ ಸಿಹಿ ನೆನಪಾಗಿ ನಿಂತವು.

ನಗುವಿನ ಹಿಂದೆ ಅಡಗಿದ್ದ ಭಾವನೆ,
ಆ ಕ್ಷಣದಲ್ಲಿ ಕಂಡಿತು ತನ್ನದೇ ಕನ್ನಡಿ.
ನಿನ್ನೆಗಿನ ನೋವು ದೂರ ಸರಿದು,
ನಾಳೆಯ ಕನಸು ಹತ್ತಿರವಾಯಿತು.

ಸಮಯವೆಂಬ ನದಿ ಹರಿಯುತ್ತಲೇ ಇದ್ದರೂ,
ಮನಸು ಮಾತ್ರ ಆ ಕ್ಷಣದಲ್ಲಿ ಉಳಿಯಿತು.
ಜೀವನವೆಂಬ ಪಯಣದಲ್ಲಿ ಕೆಲ ಕ್ಷಣಗಳು,
ಯುಗಗಳಿಗಿಂತಲೂ ಅಮೂಲ್ಯವಾಗಿರುತ್ತವೆ.

ಕಾಲ ನಿಂತಿರಲಿಲ್ಲ, ನಿಂತದ್ದು ಮನಸ್ಸು,
ಆ ಕ್ಷಣವೇ ಆಯಿತು ಮರೆಯಲಾಗದ ನೆನಪು.
ದಿನಗಳು ಕಳೆದರೂ ವರ್ಷಗಳು ಬದಲಾದರೂ,
ಆ ಕ್ಷಣ ಹೃದಯದಲ್ಲಿ ಎಂದೆಂದಿಗೂ ಉಳಿಯಿತು.

"ನೀರು ರೈತನ ಹಕ್ಕು; ಆ ಹಕ್ಕಿನ ರಕ್ಷಣೆಗೆ ಬದ್ಧ: ಬಸನಗೌಡ ಬಾದರ್ಲಿ

ಅಕ್ರಮ ನೀರು ಬಳಕೆಗೆ ಕಡಿವಾಣ ಹಾಕಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ರೈತರ ಪಾಲಿಗೆ ಮೀಸಲಾದ ನೀರು ಸಮರ್ಪಕವಾಗಿ ರೈತರ ಜಮೀನುಗಳಿಗೆ ತಲುಪಬೇಕು. ರೈತರ ಹಕ್ಕಿನ ನೀರನ್ನು ಯಾವುದೇ ವ್ಯಕ್ತಿ ಅಥವಾ ಪ್ರಭಾವಿ ವರ್ಗ ಅಕ್ರಮವಾಗಿ ಬಳಸಿಕೊಳ್ಳಲು ಅವಕಾಶ ನೀಡಬಾರದು ಎಂಬ ಸ್ಪಷ್ಟ ಸಂದೇಶವನ್ನು ವಿಧಾನಪರಿಷತ್ ಶಾಸಕರಾದ ಶ್ರೀ ಬಸನಗೌಡ ಬಾದರ್ಲಿ ಅವರು ನೀಡಿದ್ದಾರೆ.

ಸಿಂಧನೂರಿನ ಜನಸ್ಪಂದನ ಕಚೇರಿಯಲ್ಲಿ ನೀರಾವರಿ ಇಲಾಖೆಯ ಅಧಿಕಾರಿಗಳೊಂದಿಗೆ ಮಹತ್ವದ ಸಭೆ ನಡೆಸಿದ ಅವರು, ತಾಲೂಕಿನ ನೀರಾವರಿ ವ್ಯವಸ್ಥೆ, ವಿವಿಧ ಗ್ರಾಮಗಳಿಗೆ ನೀರು ಪೂರೈಕೆ, ರೈತರ ಸಮಸ್ಯೆಗಳು ಹಾಗೂ ನೀರಿನ ಅಕ್ರಮ ಬಳಕೆಯ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ತಾಲೂಕಿನ ಯಾವುದೇ ಗ್ರಾಮವೂ ನೀರಿನ ಸಮಸ್ಯೆಯಿಂದ ಬಳಲದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ಕಡೆಯ ಭಾಗದ ರೈತನ ಜಮೀನಿಗೂ ಸಮರ್ಪಕವಾಗಿ ನೀರು ತಲುಪುವಂತೆ ನೀರು ಹಂಚಿಕೆಯಲ್ಲಿ



ನ್ಯಾಯಸಮ್ಮತ ವ್ಯವಸ್ಥೆ ರೂಪಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಅಕ್ರಮ ನೀರು ಎತ್ತುವಿಕೆಗೆ ಕಡಿವಾಣ ನೀರಿನ ಅಕ್ರಮ ಎತ್ತುವಿಕೆ, ಕಳ್ಳತನ, ಅನಧಿಕೃತ ಪಂಪ್‌ಗಳ ಬಳಕೆ ಹಾಗೂ ಅನುಮತಿ ಇಲ್ಲದೆ ನೀರನ್ನು ಬೇರೆಡೆಗೆ ತಿರುಗಿಸುವಂತಹ ಚಟುವಟಿಕೆಗಳ ಬಗ್ಗೆ ಸಭೆಯಲ್ಲಿ ಗಂಭೀರವಾಗಿ ಚರ್ಚಿಸಲಾಯಿತು.

"ರೈತರ ಪಾಲಿನ ನೀರನ್ನು ಯಾರೇ ಅಕ್ರಮವಾಗಿ ಬಳಸಿಕೊಂಡರೂ ಅವರ ವಿರುದ್ಧ ಕಾನೂನುಬದ್ಧವಾಗಿ ಕ್ರಮ ಕೈಗೊಳ್ಳಬೇಕು. ಯಾವುದೇ ರಾಜಕೀಯ ಒತ್ತಡ, ಪ್ರಭಾವ ಅಥವಾ ಶಿಫಾರಸಿಗೆ ಅಧಿಕಾರಿಗಳು ಮಣಿಯಬಾರದು" ಎಂದು ಬಸನಗೌಡ ಬಾದರ್ಲಿ ಅವರು ಅಧಿಕಾರಿಗಳಿಗೆ ಸ್ಪಷ್ಟವಾಗಿ ನಿರ್ದೇಶನ ನೀಡಿದರು. ಕೊನೆಯ ಹಂತದ ರೈತನಿಗೂ ನೀರು ನೀರಾವರಿ ಯೋಜನೆಗಳ ಉದ್ದೇಶವೇ ರೈತರ ಜಮೀನುಗಳಿಗೆ ನೀರು ಒದಗಿಸುವುದು. ಹೀಗಾಗಿ ಮೇಲ್ಭಾಗದ ಪ್ರದೇಶಗಳಿಗೆ ಮಾತ್ರ ನೀರು ಸೀಮಿತವಾಗದೆ ತಾಲೂಕಿನ ಕೊನೆಯ ಹಂತದ ಗ್ರಾಮಗಳಿಗೂ ಹಾಗೂ ರೈತರ ಜಮೀನುಗಳಿಗೂ ಸಮರ್ಪಕವಾಗಿ ನೀರು ತಲುಪುವಂತೆ ಅಧಿಕಾರಿಗಳು ವಿಶೇಷ ಗಮನ ಹರಿಸಬೇಕು ಎಂದು ತಿಳಿಸಿದರು. ರೈತರ ಕೃಷಿ ಚಟುವಟಿಕೆಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ನೀರು ನಿರ್ವಹಣೆಯಲ್ಲಿ ಎಚ್ಚರಿಕೆ ವಹಿಸಬೇಕು. ಕಾಲುವೆ, ವಿತರಣಾ ವ್ಯವಸ್ಥೆ ಹಾಗೂ ನೀರು ಹರಿವಿನ ಮೇಲ್ವಿಚಾರಣೆಯನ್ನು ಪರಿಣಾಮಕಾರಿಯಾಗಿ ನಡೆಸಬೇಕು ಎಂದು ಸೂಚಿಸಿದರು.

ರೈತರ ಸಮಸ್ಯೆಗಳಿಗೆ ತಕ್ಷಣ ಸ್ಪಂದನೆ ರೈತರು ನೀರಿನ ಸಮಸ್ಯೆ ಎದುರಿಸಿದ ಸಂದರ್ಭದಲ್ಲಿ ಅಧಿಕಾರಿಗಳ ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಬಾರದು. ರೈತರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ, ಸ್ಥಳದಲ್ಲಿಯೇ ಪರಿಶೀಲನೆ ನಡೆಸಿ ಅಗತ್ಯ ಪರಿಹಾರ ಒದಗಿಸಬೇಕು ಎಂದು ಶಾಸಕರು ಅಧಿಕಾರಿಗಳಿಗೆ ಸೂಚಿಸಿದರು. ರೈತನ ಹೊಲಕ್ಕೆ ನೀರು ತಲುಪಿದಾಗ ಮಾತ್ರ ನೀರಾವರಿ ಯೋಜನೆಯ ನಿಜವಾದ ಉದ್ದೇಶ ಸಾರ್ಥಕವಾಗುತ್ತದೆ. ಆದ್ದರಿಂದ ರೈತರ ಹಿತಾಸಕ್ತಿಯೇ ಮೊದಲ ಆದ್ಯತೆಯಾಗಬೇಕು ಎಂಬ ನಿಲುವನ್ನು ಬಸನಗೌಡ ಬಾದರ್ಲಿ ಅವರು ಸಭೆಯಲ್ಲಿ ಮತ್ತೊಮ್ಮೆ ಸ್ಪಷ್ಟಪಡಿಸಿದರು.

ಕಿಸಾನ್ ಸೇನಾ ಯುವ ಘಟಕದ ಅಧ್ಯಕ್ಷರಾಗಿ ಶಬ್ಬೀರ್ ಹೆಚ್. ನೇಮಕ

❑ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ಭಾರತೀಯ ಕ್ರಾಂತಿಕಾರಿ ಕಿಸಾನ್ ಸೇನಾ (ರಿ) ದೆಹಲಿ ಸಂಘಟನೆಯ ಕಲ್ಯಾಣ ಕರ್ನಾಟಕ ಯುವ ಘಟಕದ ಅಧ್ಯಕ್ಷರಾಗಿ ಹೆಚ್. ಶಬ್ಬೀರ್ ಅವರನ್ನು ನೇಮಕ ಮಾಡಲಾಗಿದೆ.



ಸಂಘಟನೆಯ ರಾಷ್ಟ್ರೀಯ ಅಧ್ಯಕ್ಷ ಎಂ. ಎನ್. ಕುಕನೂರ್ ಅವರ ಆದೇಶದ ಮೇರೆಗೆ ಈ ನೇಮಕಾತಿ ನಡೆದಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಯುವಕರನ್ನು ಸಂಘಟಿಸುವುದು, ರೈತರು ಹಾಗೂ ಯುವಜನರ ಸಮಸ್ಯೆಗಳಿಗೆ ಧ್ವನಿಯಾಗುವುದು, ಸಾಮಾಜಿಕ ನ್ಯಾಯ ಮತ್ತು ಜನಪರ ಹೋರಾಟಗಳಿಗೆ ಯುವಶಕ್ತಿಯನ್ನು ಒಗ್ಗೂಡಿಸುವುದು ಹಾಗೂ ಸಂಘಟನೆಯ ಚಟುವಟಿಕೆಗಳನ್ನು ಬಲಪಡಿಸುವ ಜವಾಬ್ದಾರಿಯನ್ನು ನೂತನ ಅಧ್ಯಕ್ಷರಿಗೆ ವಹಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ. ಶಬ್ಬೀರ್ ಹೆಚ್. ಅವರ ನೇಮಕಕ್ಕೆ ಶುಭ ಹಾರೈಸಿರುವ ರಾಷ್ಟ್ರೀಯ ಅಧ್ಯಕ್ಷ ಎಂ. ಎನ್. ಕುಕನೂರ್, ಸಂಘಟನೆಯ ತತ್ವ-ಸಿದ್ಧಾಂತಗಳಿಗೆ ಬದ್ಧರಾಗಿ ರೈತರು, ಯುವಕರು ಹಾಗೂ ಸಾರ್ವಜನಿಕರ ಪರವಾಗಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುವಂತೆ ಕರೆ ನೀಡಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ಚಿಕ್ಕಹೊನ್ನಕುಣಿಯಲ್ಲೇ ನೀರಾವರಿ ಇಲಾಖೆ ಉಳಿಸಿ: ಕರವೇ ಆಗ್ರಹ

ಕಚೇರಿ ಸ್ಥಳಾಂತರದ ನಿರ್ಧಾರ ಕೈಬಿಡದಿದ್ದರೆ ಬೃಹತ್ ಪ್ರತಿಭಟನೆ: ಎಚ್ಚರಿಕೆ

❑ ನೈಜ್ಯ ದೆಸೆ ನ್ಯೂಸ್

ದೇವದುರ್ಗ: ರೈತರ ಸಮಸ್ಯೆಗಳಿಗೆ ಸ್ಥಳದಲ್ಲೇ ಸ್ಪಂದಿಸಬೇಕಾದ ನಾರಾಯಣಪುರ ಬಲದಂಡೆ ಕಾಲುವೆಯ ಚಿಕ್ಕಹೊನ್ನಕುಣಿ ವಿಭಾಗ ಸಂಖ್ಯೆ?6ರ ನೀರಾವರಿ ಇಲಾಖೆಯ ಕಚೇರಿಯನ್ನು ರಾಯಚೂರಿಗೆ ಸ್ಥಳಾಂತರಿಸುವ ಕ್ರಮಕ್ಕೆ ಕರ್ನಾಟಕ ಪ್ರಾಂತ ರೈತ ಸಂಘದ ದೇವದುರ್ಗ ತಾಲೂಕು ಸಮಿತಿ ತೀವ್ರ ವಿರೋಧ ವ್ಯಕ್ತಪಡಿಸಿದೆ.

ಕಚೇರಿ ಸ್ಥಳಾಂತರಿಸುವ ನಿರ್ಧಾರವನ್ನು ಕೂಡಲೇ ಕೈಬಿಟ್ಟು, ಚಿಕ್ಕಹೊನ್ನಕುಣಿಯಲ್ಲೇ ನೀರಾವರಿ ಕಚೇರಿಯನ್ನು ಮುಂದುವರಿಸಬೇಕು ಎಂದು ಸಂಘ ಆಗ್ರಹಿಸಿದೆ. ಈ ಕುರಿತು ಮಾಧ್ಯಮದವರೊಂದಿಗೆ ಮಾತನಾಡಿದ ಸಂಘದ ತಾಲೂಕು ಅಧ್ಯಕ್ಷ



ನಂದಪ್ಪ ಪಿ. ಮಡ್ಡಿ ಹಾಗೂ ಕಾರ್ಯದರ್ಶಿ ಗುರುನಾಥ ರೆಡ್ಡಿ, ಚಿಕ್ಕಹೊನ್ನಕುಣಿಯಲ್ಲಿರುವ ನೀರಾವರಿ ಕಚೇರಿ ಸುತ್ತಮುತ್ತಲಿನ ಸಾವಿರಾರು ರೈತರಿಗೆ ನೇರ ಸಂಪರ್ಕದ ಕೇಂದ್ರವಾಗಿದೆ. ಕಾಲುವೆ ನಿರ್ವಹಣೆ, ನೀರು ಹರಿವು, ಕಾಲುವೆ ದುರಸ್ತಿ, ನೀರಿನ ಕೊರತೆ ಹಾಗೂ ಬೆಳೆಗಳಿಗೆ ಸಂಬಂಧಿಸಿದ ತುರ್ತು ಸಮಸ್ಯೆಗಳನ್ನು ರೈತರು ಅಧಿಕಾರಿಗಳ ಗಮನಕ್ಕೆ ತಂದು ಸ್ಥಳದಲ್ಲೇ ಪರಿಹಾರ ಪಡೆಯಲು ಈ ಕಚೇರಿ ಅತ್ಯಂತ ಅನುಕೂಲವಾಗಿದೆ ಎಂದು ತಿಳಿಸಿದರು.

"ನೀರಾವರಿ ಇಲಾಖೆ ರೈತರಿಗೆ ಅನುಕೂಲ ಕಲ್ಪಿಸಬೇಕೇ ಹೊರತು, ರೈತರಿಂದ ದೂರವಾಗಬಾರದು. ಕಾಲುವೆಯಲ್ಲಿ ನೀರು ನಿಂತಾಗ, ಕಾಲುವೆ ಒಡೆದಾಗ ಅಥವಾ ಬೆಳೆಗಳಿಗೆ ನೀರಿನ ಕೊರತೆಯಾದಾಗ ರೈತರು ದೂರದ ರಾಯಚೂರಿನ ಕಚೇರಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಬಾರದು" ಎಂದು ಅವರು ಹೇಳಿದರು.

ಚಿಕ್ಕಹೊನ್ನಕುಣಿ ವಿಭಾಗ ಸಂಖ್ಯೆ?6ರ ನೀರಾವರಿ ಕಚೇರಿಯನ್ನು ರಾಯಚೂರಿಗೆ ಸ್ಥಳಾಂತರಿಸುವ ಪ್ರಕ್ರಿಯೆಯನ್ನು ತಕ್ಷಣವೇ ಸ್ಥಗಿತಗೊಳಿಸಿ, ಇದೇ ಸ್ಥಳದಲ್ಲಿ ಕಚೇರಿಯನ್ನು ಮುಂದುವರಿಸಬೇಕು. ಇಲ್ಲವಾದಲ್ಲಿ ಸರ್ಕಾರ ಹಾಗೂ ನೀರಾವರಿ ಇಲಾಖೆ ಅಧಿಕಾರಿಗಳ ವಿರುದ್ಧ ಕರ್ನಾಟಕ ರಕ್ಷಣಾ ವೇದಿಕೆ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.ಈ ಸಂದರ್ಭದಲ್ಲಿ ಜಾಲಹಳ್ಳಿ ಹೋಬಳಿ ಕರವೇ ಘಟಕದ ಅಧ್ಯಕ್ಷರಾದ ತಮ್ಮಣ ಹೆರುಂಡಿ ಉಪಸ್ಥಿತರಿದ್ದರು

ಪೇಟೆ ಬಸವೇಶ್ವರ ಸೌಹಾರ್ದ ಸಹಕಾರಿ ಸಂಘದ ನಾಲ್ಕನೇ ವಾರ್ಷಿಕ ಮಹಾಜನ ಸಭೆ

❑ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ಪಟ್ಟಣದ ಎಸ್ಎನ್‌ಪೇಟೆಯ ಶ್ರೀ ರಾಘವೇಂದ್ರ ಸ್ವಾಮಿ ಶಾಖಾ ಮಠದ ಭವನದಲ್ಲಿ ಶ್ರೀ ಪೇಟೆ ಬಸವೇಶ್ವರ ಸೌಹಾರ್ದ ಸಹಕಾರಿ ಸಂಘದ ನಾಲ್ಕನೇ ವಾರ್ಷಿಕ ಮಹಾಜನ ಸಭೆ ರವಿವಾರ ನಡೆಯಿತು.

ಸಂಘದ ಅಧ್ಯಕ್ಷ ಜಗದೀಶ ಜಿ.ರಾಯ್ಕರ್ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿ, ಸಹಕಾರಿ ಸಂಘವು ಕಂಪ್ಲಿ ಸೇರಿದಂತೆ ಬಳ್ಳಾರಿ, ವಿಜಯನಗರ, ಕೊಪ್ಪಳ, ರಾಯಚೂರು ಜಿಲ್ಲೆಗಳನ್ನು ಒಳಗೊಂಡಿರುತ್ತದೆ. ಸಂಘವು 2073 ಜನ ಸದಸ್ಯರನ್ನು ಹೊಂದಿದೆ. ಶೇರು ಬಂಡವಾಳ ರೂ ಎರಡು ಕೋಟಿ ಇಪ್ಪತ್ತು ಐದು ಲಕ್ಷ ಒಂಬತ್ತುಸಾವಿರಗಳು ಇರುತ್ತವೆ. ಸುಮಾರು 50,09,037.46 ಗಳಷ್ಟು ನಿಧಿಗಳನ್ನು ಹೊಂದಿದೆ. ಸುಮಾರು 16ಕೋಟಿ 33ಲಕ್ಷ 10ಸಾವಿರ 758 ರೂಪಾಯಿ ಸಂಗ್ರಹಿಸಿರುತ್ತದೆ.



ಜಾಮೀನುಸಾಲ, ಮಾರ್ಟಗೇಜ್ ಸಾಲ, ವಾಹನಸಾಲ, ಬಂಗಾರದ ಮೇಲೆ ಸಾಲ, ಹೈಪಾತಿಕೇಶನ್ ಸಾಲ, ಡಿಪಾಜಿಟ್ ಮೇಲೆ ಸುಮಾರು 16,23,10,974 ರೂ. ಗಳ ಸಾಲ ವಿತರಿಸಲಾಗಿದೆ.ಸಾಲ ರೂಪದಲ್ಲಿ ವಿತರಿಸಲಾಗಿದೆ. ಶೇ.90% ರಷ್ಟು ವಸೂಲಾತಿ ಗುರಿ ಸಾಧಿಸಲಾಗಿದೆ. ಪ್ರಸಕ್ತವಾಗಿ ಸಂಘವು 1ಕೋಟಿ 9 ಲಕ್ಷ 52 ಸಾವಿರ ನಿವ್ವಳ ಲಾಭಗಳಿಸಿದೆ. ಸಂಘದ ಅಭಿವೃದ್ಧಿಗೆ ಪ್ರತಿಯೊಬ್ಬರ ಸಹಕಾರ ಅಗತ್ಯವಾಗಿದೆ ಎಂದರು. ಮುಖ್ಯಕಾರ್ಯನಿರ್ವಾಹಕ ಕೆ. ಎಂ.ಕೃತಿಕ್ ವಾರ್ಷಿಕ ವರದಿ ಮಂಡಿಸಿದರು.

ನಂತರ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಹಾಗೂ ವಿವಿಧ ಸಹಕಾರಿ ಸಂಘದ ಆಡಳಿತ ಮಂಡಳಿಯವರಿಗೆ ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷ ಡಾ.ಅಶೋಕ ಬಿ.ಹಂದ್ರಾಳ, ನಿರ್ದೇಶಕರಾದ ಕೆ.ರಮೇಶ ರೆಡ್ಡಿ, ವಿರೇಶ ತಾಂಡೂರು, ಕಟ್ಟೆ ವೆಂಕಟೇಶ, ಕರಿಬಸವನಗೌಡ, ಕೃಷ್ಣ ಎಸ್.ಪೋಳ, ಜಿ.ವೀರಭದ್ರಪ್ಪ, ಮನೋಜ್ ಜಿ.ರಾಯ್ಕರ್, ಕೆ.ಎಂ.ಅನಿತಾ ಸುಧಾಕರ, ಸಂಧ್ಯಾ, ಮಾನಸ, ಪ್ರತ್ಯುಷ, ಹೆಚ್.ಎಂ.ಕುಮಾರಸ್ವಾಮಿ, ಟಿ.ಶಂಕರ, ಪಿ..ಜಿಂದಾವಲಿ, ಎನ್.ಚಿದಾನಂದ, ಸತೀಶ ಭತ್ತದ್, ಕೆ.ಎಂ.ಸುಧಾಕರ, ಬಿ.ಸಂತೋಷ್, ವೈ.ರವಿಶಂಕರ, ಅಪೆಕ್ಸ್ ಬ್ಯಾಂಕ್ ನಿರ್ದೇಶಕ ಪಿ.ಮೂಕಯ್ಯಸ್ವಾಮಿ, ಮುಖಂಡರಾದ ಎಸ್.ಎಂ.ನಾಗರಾಜ, ಅಳ್ಳಳ್ಳಿ ವಿರೇಶ, ಜಿ.ಲಿಂಗನಗೌಡ, ವ್ಯವಸ್ಥಾಪಕ ಮಹಮ್ಮದ್ ಗೌಸ್ ಸಿಬ್ಬಂದಿ ಸೈಫುಲ್ಲಾ ಸೇರಿದಂತೆ ಇತರರು ಹಾಗೂ ಸಿಬ್ಬಂದಿ ಇದ್ದರು.

ಜಾಲಹಳ್ಳಿಯಲ್ಲಿ ಜಗದಾರಾಧ್ಯ ಜಯಶಾಂತಲಿಂಗೇಶ್ವರ ಜಯಂತೋತ್ಸವ

ಶ್ರೀಮಠದಲ್ಲಿ ಅಡ್ಡಪಲ್ಲಕ್ಕಿ ಮಹೋತ್ಸವ, ಪುರಾಣ ಮಹಾಮಂಗಲ ಹಾಗೂ ಧರ್ಮ ಚಿಂತನ ಗೋಷ್ಠಿ ಸಂಪನ್ನ

❑ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿಯ ಜಗದ್ಗುರು ಜಯಶಾಂತಲಿಂಗೇಶ್ವರ ಶ್ರೀಮಠದಲ್ಲಿ ಸೆ.12ರಂದು ಪ್ರತಿವರ್ಷದ ಸಂಪ್ರದಾಯದಂತೆ ಜಗದಾರಾಧ್ಯ ಜಯಶಾಂತಲಿಂಗೇಶ್ವರ ಜಯಂತೋತ್ಸವದ ಅಂಗವಾಗಿ ಅಡ್ಡಪಲ್ಲಕ್ಕಿ ಮಹೋತ್ಸವ, ಪುರಾಣ ಮಹಾಮಂಗಲ ಹಾಗೂ ಧರ್ಮ ಚಿಂತನ ಗೋಷ್ಠಿ ಕಾರ್ಯಕ್ರಮಗಳು ವಿಜೃಂಭಣೆಯಿಂದ ಜರುಗಿದವು.

ಬೆಳಿಗ್ಗೆ ಶ್ರೀಮಠದಿಂದ ಜಯಶಾಂತಲಿಂಗೇಶ್ವರರ ರಜತ ವಿಗ್ರಹವನ್ನು ಪುಷ್ಪಾಲಂಕೃತ ಅಡ್ಡಪಲ್ಲಕ್ಕಿಯಲ್ಲಿ ಪ್ರತಿಷ್ಠಾಪಿಸಿ ತಪೋಧಾಮದವರೆಗೆ ಮೆರವಣಿಗೆ ನಡೆಸಲಾಯಿತು. ಪರಮಪೂಜ್ಯ ಜಗದ್ಗುರು ಜಯಶಾಂತಲಿಂಗೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಓಂಕಾರ ಧರ್ಮಧ್ವಜಾರೋಹಣ ನೆರವೇರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಜಾಲಹಳ್ಳಿ ಗ್ರಾಮದ ವತನದಾರರಾದ ರಾಜರಂಗಪ್ಪ ನಾಯಕ, ಕೊಪ್ರೇಶ ರಾವ್ ದೇಸಾಯಿ, ಶರಣಗೌಡ ಪೊಲೀಸ್ ಪಾಟೀಲ, ಅಮರೇಗೌಡ ಮಾಲಿಪಾಟೀಲ ಹಾಗೂ ಪ್ರಭಾಕರ ಕುಲಕರ್ಣಿ ಅವರು ಜ್ಯೋತಿ ಬೆಳಗಿಸಿ ಅಡ್ಡಪಲ್ಲಕ್ಕಿ ಮೆರವಣಿಗೆಗೆ ಚಾಲನೆ ನೀಡಿದರು.



ಸಾಯಂಕಾಲ ಪುರಾಣ ಮಹಾಮಂಗಲದೊಂದಿಗೆ ಧರ್ಮ ಚಿಂತನ ಗೋಷ್ಠಿ ನಡೆಯಿತು. ದೇವದುರ್ಗದ ಶ್ರೀ ಅಭಿನವ ಗಂಗಾಧರ ಶಿವಾಚಾರ್ಯರು ಅಧ್ಯಕ್ಷತೆ ವಹಿಸಿದ್ದರು. ದೇವಾಪುರದ ಶ್ರೀ ಶಿವಮೂರ್ತಿ ಶಿವಾಚಾರ್ಯರು ಉದ್ಘಾಟಕರಾಗಿ ಪಾಲ್ಗೊಂಡರು. ನವಲಕಲ್ ಹಿರೇಮಠದ ಶ್ರೀ ಸೋಮನಾಥ ಶಿವಾಚಾರ್ಯರು ಧರ್ಮೋಪದೇಶ ನೀಡಿದರು.

ಕಾರ್ಯಕ್ರಮದಲ್ಲಿ ಮಾಜಿ ಸಂಸದರಾದ ಬಿ.ವಿ. ನಾಯಕ, ವೀರಶೈವ ಸಮಾಜದ ಅಧ್ಯಕ್ಷ ಚಂದ್ರಶೇಖರ ಪಾಟೀಲ ಮಿರ್ಜಾಪುರ, ಮಾಜಿ ಎಪಿಎಂಸಿ ಅಧ್ಯಕ್ಷ ಅದನಗೌಡ ಪಾಟೀಲ, ತಾಲೂಕು ಅಖಿಲ ಭಾರತ ವೀರಶೈವ ಸಮಾಜದ ಅಧ್ಯಕ್ಷ ಶಿಖರೇಶ ಪಾಟೀಲ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ರಾಮಣ್ಣ ಇರಬಗೇರಾ, ಮಾಜಿ ಜಿ.ಪಂ. ಸದಸ್ಯ ಫಕೀರಗೌಡ ಮಾನವಿ, ದೇವದುರ್ಗದ ರಾಜಕೀಯ ಮುಖಂಡ ಎ. ಮಲ್ಲಿಕಾರ್ಜುನ ಪಾಟೀಲ, ಹುಣಸಗಿಯ ರಾಜಕೀಯ ಮುಖಂಡ ನಿಂಗಣ್ಣ ಬಳಿಸಾಹು, ಜಿ.ಪಂ. ಸದಸ್ಯ ಬಸವರಾಜ ಸ್ಥಾವರಮಠ, ಉದ್ಯಮಿ ನಿಖಿಲ್ ಹೆಗಡೆ, ರಾಜ್ಯ ಪ್ರಧಾನ ಕಾರ್ಯದರ್ಶಿ ತಿಮ್ಮಣ್ಣ ನಾಯಕ, ಪರಿಶಿಷ್ಟ ಪಂಗಡ ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶರಣಗೌಡ ಬಿಕ್ರಿ, ಮೂಡಲಗುಂಡದ ರಾಜಕೀಯ ಮುಖಂಡ ಸಿದ್ದನಗೌಡ, ಗಣೇಕಲ್‌ನ ಶರಣಗೌಡ ಮಾಲಿಪಾಟೀಲ, ಮಲ್ಲಣ್ಣ ಸಾಹುಕಾರ ನಾಗರಾಳ, ಜಾಲಹಳ್ಳಿ ಪಿಎಸ್ಐ ವೈಶಾಲಿ ಜಳಕಿ, ಉದ್ಯಮಿ ವಿದ್ಯಾನಂದ ದೇಸಾಯಿ ಬಾಗಲಕೋಟೆ, ಕೋಟ್ರೇಶಪ್ಪ ಕೋರಿ ಹಾಗೂ ಡಾ. ನಾಗರಾಜ ಬಾಲ್ಕಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ದೂರದರ್ಶನ ಬಾಗಲಕೋಟೆಯ ಹಾಸ್ಯ ಕಲಾವಿದೆ ಶ್ರೀಮತಿ ಇಂದುಮತಿ ಸಾಲಿಮಠ ಅವರು ಸುಶ್ರಾವ್ಯವಾಗಿ ಹಾಡುಗಳನ್ನು ಹಾಡಿ, ತಮ್ಮ ಜೀವನಾನುಭವಗಳನ್ನು ಹಂಚಿಕೊಂಡು ಸಭಿಕರನ್ನು ರಂಜಿಸಿದರು. ಈ ಸಂದರ್ಭದಲ್ಲಿ ಜಾಲಹಳ್ಳಿ ಧರ್ಮಪ್ರಭುಗಳು ಆಶೀರ್ವಚನ ನೀಡಿ, ಭಾರತೀಯ ಧರ್ಮ ಪರಂಪರೆಯನ್ನು ಮುಂದುವರಿಸಿಕೊಂಡು ಹೋಗುವುದರಿಂದ ಮನುಷ್ಯನಲ್ಲಿ ಮಾನವೀಯ ಮೌಲ್ಯಗಳು ಬೆಳೆದು, ಆತ್ಮರಕ್ಷಣೆ ಹಾಗೂ ಸಮಾಜದ ಒಳಿತಿಗೆ ಪ್ರತಿಯೊಬ್ಬರೂ ಸಮರ್ಥರಾಗುತ್ತಾರೆ. ಧರ್ಮ, ಸಂಸ್ಕೃತಿ ಹಾಗೂ ಧರ್ಮಗುರುಗಳ ಮಾರ್ಗದರ್ಶನವನ್ನು ಗೌರವದಿಂದ ಪಾಲಿಸುವುದು ಅಗತ್ಯ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ರಾಜ್ಯ ಮಟ್ಟದ ವೈದ್ಯಕೀಯ ಶಿಕ್ಷಕ ಪ್ರಶಸ್ತಿ ಪುರಸ್ಕೃತ ಡಾ. ಬಸವರಾಜ್ ಎಂ. ಪಾಟೀಲ, ಜಿಲ್ಲಾ ಮಟ್ಟದ ಅತ್ಯುತ್ತಮ ವರದಿಗಾರ ಪ್ರಶಸ್ತಿ ಪುರಸ್ಕೃತ ಸುರೇಶಗೌಡ ಮಡಬಾಳ ಹಾಗೂ ತಾಲೂಕು ಮಟ್ಟದ ಅತ್ಯುತ್ತಮ ವರದಿಗಾರ ಪ್ರಶಸ್ತಿ ಪುರಸ್ಕೃತ ಮಾನೇಶ್ ಜಾಲಹಳ್ಳಿ ಅವರನ್ನು ಶ್ರೀಮಠದ ವತಿಯಿಂದ ಸನ್ಮಾನಿಸಲಾಯಿತು. ಪುರಾಣಿಕರು, ತಬಲಾ ವಾದಕರು ಹಾಗೂ ಸಂಗೀತಗಾರರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಶ್ರೀ ಸಂಗಯ್ಯ ಗಣಾಚಾರಿ ಹಾಗೂ ಶ್ರೀ ಸಂಗನಬಸಯ್ಯ ಹಿರೇಮಠ ಪರಿವಾರದ ವತಿಯಿಂದ ಜಾಲಹಳ್ಳಿ ಶ್ರೀಗಳಿಗೆ ತುಲಾಭಾರ ಸೇವೆ ನೆರವೇರಿಸಲಾಯಿತು.



ಕಾರ್ಯಕ್ರಮದಲ್ಲಿ ಪಾಲ್ಗೊಂಡ ಪೂಜ್ಯರು ಹಾಗೂ ಗಣ್ಯರನ್ನು ಶ್ರೀ ಶ್ರೀಧರ ಹಿರೇಮಠ ಅವರು ಸ್ವಾಗತಿಸಿದರು. ಶ್ರೀಮತಿ ವಿಜಯಲಕ್ಷ್ಮಿ ಜಿ. ನಾಯಕ, ಶಿಕ್ಷಕಿ ಅವರು ಕಾರ್ಯಕ್ರಮವನ್ನು ನಿರೂಪಿಸಿದರು.

ನೇಮಕಾತಿ ಪ್ರಕಟಣೆ


UPSC ನೇಮಕಾತಿ 2026 ? 212 ಸ್ಪೆಷಲಿಸ್ಟ್ ಮತ್ತು ಸಹಾಯಕ ಸಾರ್ವಜನಿಕ ಅಭಿಯೋಜಕ (Assistant Public Prosecutor) ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಸೆಪ್ಟೆಂಬರ್ 11, 2026

UPSC ನೇಮಕಾತಿ 2026: 212 ಸ್ಪೆಷಲಿಸ್ಟ್ ಮತ್ತು ಸಹಾಯಕ ಸಾರ್ವಜನಿಕ ಅಭಿಯೋಜಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಸೆಪ್ಟೆಂಬರ್ 2026ರ ಅಧಿಕೃತ ಅಧಿಸೂಚನೆಯ ಮೂಲಕ ಸ್ಪೆಷಲಿಸ್ಟ್ ಹಾಗೂ ಸಹಾಯಕ ಸಾರ್ವಜನಿಕ ಅಭಿಯೋಜಕ ಹುದ್ದೆಗಳನ್ನು ಭರ್ತಿ ಮಾಡಲು, ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಕೇಂದ್ರ ಲೋಕಸೇವಾ ಆಯೋಗವು (UPSC) ಅರ್ಜಿಗಳನ್ನು ಆಹ್ವಾನಿಸಿದೆ. ಅಖಿಲ ಭಾರತ ಮಟ್ಟದ ಸರ್ಕಾರಿ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 02-ಅಕ್ಟೋಬರ್-2026 ರೊಳಗೆ ಅಥವಾ ಅಂದು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: upsc.gov.in

ಇಂದು ತೋಪಲಕಟ್ಟೆಯಲ್ಲಿ ಜಾನಪದ ಸಂಗೀತ ಕಾರ್ಯಕ್ರಮ

❏ ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೊಪ್ಪಳ ಹಾಗೂ ಶ್ರೀ ಕನಕದಾಸ ಗ್ರಾಮೀಣಾಭಿವೃದ್ಧಿ ಸಂಸ್ಥೆ (ರಿ.), ತೋಪಲಕಟ್ಟೆ ಇವರ ಸಹಯೋಗದಲ್ಲಿ ಪ್ರಾಯೋಜಿತ ಜಾನಪದ ಸಂಗೀತ ಕಾರ್ಯಕ್ರಮ ಇಂದು ತೋಪಲಕಟ್ಟೆಯ ಶ್ರೀ ಮಾರುತೇಶ್ವರ ದೇವಸ್ಥಾನದ ಆವರಣದಲ್ಲಿ ನಡೆಯಲಿದೆ.



ಸಂಜೆ 7 ಗಂಟೆಗೆ ಆರಂಭವಾಗಲಿರುವ ಕಾರ್ಯಕ್ರಮದಲ್ಲಿ ಜಾನಪದ ಕಲಾವಿದರಿಂದ ವಿವಿಧ ಜಾನಪದ ಸಂಗೀತ ಹಾಗೂ ಕಲಾ ಪ್ರದರ್ಶನಗಳು ನಡೆಯಲಿವೆ. ಗ್ರಾಮೀಣ ಭಾಗದ ಜಾನಪದ ಕಲೆ, ಸಂಸ್ಕೃತಿ ಮತ್ತು ಪರಂಪರೆಯನ್ನು ಉಳಿಸಿ ಬೆಳೆಸುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿದೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೊಪ್ಪಳದ ಸಹಾಯಕ ನಿರ್ದೇಶಕ ಕರ್ಣಕುಮಾರ ಕೆ. ಅವರ ಸಹಕಾರದಲ್ಲಿ ಕಾರ್ಯಕ್ರಮ ನಡೆಯಲಿದೆ. ಶ್ರೀ ಕನಕದಾಸ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು ಕಾರ್ಯಕ್ರಮಕ್ಕೆ ಸಿದ್ಧತೆ ಕೈಗೊಂಡಿದ್ದು, ತೋಪಲಕಟ್ಟೆ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಕಲಾಭಿಮಾನಿಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದ್ದಾರೆ.

ಜಾನಪದ ಸಿರಿ ರಾಜ್ಯ ಪ್ರಶಸ್ತಿ'ಗೆ ಶಿವರಾಜ್ ಕಾಂಬಳೆ ಆಯ್ಕೆ

❏ ನೈಜ್ಯ ದೆಸೆ ನ್ಯೂಸ್

ಕಲಬುರಗಿ: ಕರ್ನಾಟಕ ಜಾನಪದ ಅಕಾಡೆಮಿ ವತಿಯಿಂದ ನೀಡಲಾಗುವ 'ಜಾನಪದ ಸಿರಿ ರಾಜ್ಯ ಪ್ರಶಸ್ತಿ'ಗೆ ಕಲಬುರಗಿ ಜಿಲ್ಲೆಯ ಖ್ಯಾತ ಜಾನಪದ ಕಲಾವಿದ ಶಿವರಾಜ್ ಕಾಂಬಳೆ ಅವರು ಆಯ್ಕೆಯಾಗಿದ್ದಾರೆ.



ಜಾನಪದ ಕಲೆ ಹಾಗೂ ಸಾಂಸ್ಕೃತಿಕ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆಯನ್ನು ಗುರುತಿಸಿ ಶಿವರಾಜ್ ಕಾಂಬಳೆ ಅವರನ್ನು ಈ ಪ್ರತಿಷ್ಠಿತ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಗ್ರಾಮೀಣ ಜನಪದ ಕಲೆ, ಸಂಪ್ರದಾಯ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸುವಲ್ಲಿ ಶಿವರಾಜ್ ಕಾಂಬಳೆ ಅವರ ಕೊಡುಗೆ ಗಮನಾರ್ಹವಾಗಿದೆ. ಸೆಪ್ಟೆಂಬರ್ 12ರಂದು ನಡೆಯಲಿರುವ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಶಿವರಾಜ್ ಕಾಂಬಳೆ ಅವರಿಗೆ 'ಜಾನಪದ ಸಿರಿ ರಾಜ್ಯ ಪ್ರಶಸ್ತಿ' ಪ್ರದಾನ ಮಾಡಲಾಗುವುದು. ಕಲಬುರಗಿ ಜಿಲ್ಲೆಯ ಕಲಾವಿದರ ವಲಯದಲ್ಲಿ ಈ ಆಯ್ಕೆ ಸಂತಸಕ್ಕೆ ಕಾರಣವಾಗಿದ್ದು, ಅಭಿಮಾನಿಗಳು ಹಾಗೂ ಕಲಾಸಕ್ತರು ಶಿವರಾಜ್ ಕಾಂಬಳೆ ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

ಹೊಸೂರು ಸಿದ್ದಾಪುರ ಗ್ರಾಮದಲ್ಲಿ ಶ್ರಾವಣ ಮಾಸದ ಅಂಗವಾಗಿ ಅದ್ಧೂರಿಯಾಗಿ ಜರುಗಿದ ಶ್ರೀ ದುರ್ಗಾದೇವಿಯ ಪಲ್ಲಕ್ಕಿ ಉತ್ಸವ

ಭಕ್ತಿಭಾವ, ಡೊಳ್ಳು-ಭಜನೆ ಹಾಗೂ ಜಯಘೋಷಗಳೊಂದಿಗೆ ವಿಜೃಂಭಣೆಯ ಮೆರವಣಿಗೆ

❏ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ಇಲ್ಲಿಗೆ ಸಮೀಪದ ಹೊಸೂರು ಸಿದ್ದಾಪುರ ಗ್ರಾಮದ ಆರಾಧ್ಯ ದೇವತೆ ಶ್ರೀ ದುರ್ಗಾದೇವಿಯ ಶ್ರಾವಣ ಮಾಸದ ಪಲ್ಲಕ್ಕಿ ಉತ್ಸವವು ವಿವಿಧ ಧಾರ್ಮಿಕ ವಿಧಿವಿಧಾನಗಳೊಂದಿಗೆ ಭಕ್ತಿಭಾವದಿಂದ ಹಾಗೂ ವಿಜೃಂಭಣೆಯಿಂದ ಜರುಗಿತು.

ಉತ್ಸವದ ಅಂಗವಾಗಿ ಸೆ.11ರಂದು ಶುಕ್ರವಾರ ಶ್ರೀ ದುರ್ಗಾದೇವಿಯ ಪಲ್ಲಕ್ಕಿಯನ್ನು ಕೃಷ್ಣಾ ನದಿಗೆ ಕೊಂಡೊಯ್ದು ಗಂಗಾಸ್ನಾನ ನೆರವೇರಿಸಲಾಯಿತು. ಭಕ್ತರು ಪಲ್ಲಕ್ಕಿಯೊಂದಿಗೆ ನದಿಗೆ ತೆರಳಿ ವಿಶೇಷ ಪೂಜೆ ಸಲ್ಲಿಸಿ ದೇವಿಯ ಆಶೀರ್ವಾದ ಪಡೆದರು. ಬಳಿಕ ಸೆ.12ರಂದು ಮಧ್ಯರಾತ್ರಿ 12 ಗಂಟೆಗೆ ಶ್ರೀ ದುರ್ಗಾದೇವಿಯ ಪಲ್ಲಕ್ಕಿಯು ದೇವಸ್ಥಾನದ ಕಟ್ಟೆಯ ಮೇಲೆ ಬಂದು ಕುಳಿತುಕೊಂಡಿತು. ಈ ಸಂದರ್ಭದಲ್ಲಿ ಅಪಾರ ಸಂಖ್ಯೆಯ ಭಕ್ತರು ದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ರಾತ್ರಿ ವೇಳೆಯಲ್ಲಿಯೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ದೇವಿಯ ಸೇವೆಯಲ್ಲಿ ಭಾಗಿಯಾದರು.

ಸೆ.13ರಂದು ಶ್ರೀ ದುರ್ಗಾದೇವಿಯ ಪಲ್ಲಕ್ಕಿಯು ಹೊಸೂರು ಸಿದ್ದಾಪುರ



ಗ್ರಾಮದ ಶ್ರೀ ಆಂಜನೇಯ ದೇವಸ್ಥಾನಕ್ಕೆ ಆಗಮಿಸಿತು. ದೇವಸ್ಥಾನದ ಮುಂಭಾಗದಲ್ಲಿ ಡೊಳ್ಳು, ಭಜನೆ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಭಕ್ತರು ದೇವಿಯನ್ನು ಸ್ವಾಗತಿಸಿದರು. ಸಂಜೆ 5ರಿಂದ 6 ಗಂಟೆಯವರೆಗೆ ಶ್ರೀ ದುರ್ಗಾದೇವಿಯ ಪಲ್ಲಕ್ಕಿಯನ್ನು ಡೊಳ್ಳು ಹಾಗೂ ಭಜನೆಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಭವ್ಯ ಮೆರವಣಿಗೆಯ ಮೂಲಕ ಕೊಂಡೊಯ್ಯಲಾಯಿತು. ಮೆರವಣಿಗೆಯಲ್ಲಿ ಮಹಿಳೆಯರು, ಮಕ್ಕಳು, ಯುವಕರು ಹಾಗೂ ಹಿರಿಯರು ಸೇರಿದಂತೆ ಅಪಾರ ಸಂಖ್ಯೆಯ ಗ್ರಾಮಸ್ಥರು ಭಾಗವಹಿಸಿದ್ದರು. ಭಕ್ತರು ದೇವಿಯ ನಾಮಸ್ಮರಣೆ ಹಾಗೂ ಜಯಘೋಷಗಳನ್ನು ಮೊಳಗಿಸುವ ಮೂಲಕ ಸಂಭ್ರಮಿಸಿದರು.

ಮೆರವಣಿಗೆಯುದ್ದಕ್ಕೂ ಗ್ರಾಮದ ಪ್ರಮುಖ ಬೀದಿಗಳು ಹಬ್ಬದ ವಾತಾವರಣದಿಂದ ಕಂಗೊಳಿಸಿದವು. ಡೊಳ್ಳಿನ ನಾದ, ಭಜನೆಯ ಸದ್ದು ಹಾಗೂ ಭಕ್ತರ ಜಯಘೋಷಗಳಿಂದ ಇಡೀ ಗ್ರಾಮವೇ ಭಕ್ತಿಮಯವಾಗಿತ್ತು. ನಂತರ ಶ್ರೀ ದುರ್ಗಾದೇವಿಯ ಪಲ್ಲಕ್ಕಿಯನ್ನು ದೇವಸ್ಥಾನಕ್ಕೆ ಕರೆತಂದು ವಿಶೇಷ ಪೂಜೆ ಹಾಗೂ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಶ್ರೀ ದುರ್ಗಾದೇವಿಯ ಪೂಜಾರಿ ಪಿಡ್ಡಪ್ಪ ಪೂಜಾರಿ ಅವರು ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿದರು.

ಶ್ರಾವಣ ಮಾಸದ ಅಂಗವಾಗಿ ನಡೆದ ಪಲ್ಲಕ್ಕಿ ಉತ್ಸವವು ಗ್ರಾಮಸ್ಥರಲ್ಲಿ ಭಕ್ತಿ, ಸೌಹಾರ್ದತೆ ಹಾಗೂ ಒಗ್ಗಟ್ಟಿನ ಭಾವನೆ ಮೂಡಿಸಿತು. ಗ್ರಾಮದ ಹಿರಿಯರು, ಮುಖಂಡರು, ಮಹಿಳೆಯರು, ಯುವಕರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಉತ್ಸವವನ್ನು ಯಶಸ್ವಿಗೊಳಿಸಿದರು. ಶ್ರೀ ದುರ್ಗಾದೇವಿಯ ಪಲ್ಲಕ್ಕಿ ಉತ್ಸವವು ಭಕ್ತಿಭಾವ, ಸಂಭ್ರಮ ಹಾಗೂ ಸಾಂಪ್ರದಾಯಿಕ ಆಚರಣೆಗಳೊಂದಿಗೆ ವಿಜೃಂಭಣೆಯಿಂದ ಸಂಪನ್ನಗೊಂಡಿತು.

ವರದಿ ಖಾಜಾ ಹುಸೇನ್ ಬಾಬಾ ಜಾಲಹಳ್ಳಿ

ಗಣೇಶ ಚತುರ್ಥಿ: ಅಂಜುಮನ್ ಕಮಿಟಿಯಿಂದ ಸೌಹಾರ್ದತೆಯ ಸಂದೇಶ ಗಜಾನನ ಮಂಡಳಿಗಳ ಸದಸ್ಯರಿಗೆ ಸನ್ಮಾನ

❏ ನೈಜ್ಯ ದೆಸೆ ನ್ಯೂಸ್

ಲಿಂಗಸೂಗೂರ: ಗಣೇಶ ಚತುರ್ಥಿ ಪ್ರಯುಕ್ತ ಅಂಜುಮನ್-ಎ-ಮುಸ್ಲಿಮೀನ್ ಲಿಂಗಸೂಗೂರ ತಾಲೂಕು ಕಮಿಟಿ ವತಿಯಿಂದ ಪಟ್ಟಣದ ವಿವಿಧೆಡೆ ಪ್ರತಿಷ್ಠಾಪಿಸಲಾದ ಗಣಪತಿ ಮೂರ್ತಿಗಳ ಸ್ಥಳಗಳಿಗೆ ಭೇಟಿ ನೀಡಿ, ಗಣೇಶೋತ್ಸವಕ್ಕೆ ಶ್ರಮಿಸಿದ ಗಜಾನನ ಮಂಡಳಿಗಳ ಸದಸ್ಯರನ್ನು ಸನ್ಮಾನಿಸಲಾಯಿತು. ಇದೇ ಸಂದರ್ಭದಲ್ಲಿ ಗಜಾನನ ಮಂಡಳಿಗಳ ಸದಸ್ಯರು ಅಂಜುಮನ್ ಕಮಿಟಿಯ ಪದಾಧಿಕಾರಿಗಳು ಹಾಗೂ ಸದಸ್ಯರನ್ನು ಸನ್ಮಾನಿಸಿದರು.

ಈ ವೇಳೆ ಅಂಜುಮನ್ ಕಮಿಟಿ ಅಧ್ಯಕ್ಷ ಹುಸೇನ್ ಭಾಷಾ ಮಾತನಾಡಿ, "ಹಬ್ಬಗಳು ಧರ್ಮದ ಆಚರಣೆಗಳ ಜೊತೆಗೆ ಸಮಾಜದಲ್ಲಿ ಪ್ರೀತಿ, ಸೌಹಾರ್ದತೆ ಮತ್ತು ಸಹೋದರತ್ವ ಬೆಳೆಸುವ ಅವಕಾಶಗಳಾಗಬೇಕು. ಲಿಂಗಸೂಗೂರಿನಲ್ಲಿ ಎಲ್ಲ ಸಮುದಾಯದವರು ಪರಸ್ಪರ ಗೌರವದಿಂದ, ಶಾಂತಿ ಮತ್ತು ಒಗ್ಗಟ್ಟಿನಿಂದ ಬದುಕುವ ವಾತಾವರಣ ಇನ್ನಷ್ಟು ಗಟ್ಟಿಯಾಗಬೇಕು" ಎಂದು ಹೇಳಿದರು.

ಈ ಸಂದರ್ಭದಲ್ಲಿ ಗೌರವ ಅಧ್ಯಕ್ಷ ಅನ್ವರುದ್ದಿನ್, ಉಪಾಧ್ಯಕ್ಷ ಮುಸ್ತಫಾ, ಜೆ. ಬಾಬು, ಸಲೀಂ, ವಸೀಂ ಪಾಷಾ, ಮಹಮ್ಮದ್ ರಫಿ, ಇಮಾಮ್ ಸಾಬ್, ಅಮೀನುದ್ದಿನ್ ಟೈಲರ್, ರಜ್ಜಬ್, ಜಾವೀದ್, ವಸೀಂ, ಆಕ್ರಂ ಸೇರಿದಂತೆ ಅಂಜುಮನ್ ಕಮಿಟಿ ಸದಸ್ಯರು ಹಾಗೂ ಗಜಾನನ



ಮಂಡಳಿಗಳ ಸದಸ್ಯರು ಉಪಸ್ಥಿತರಿದ್ದರು.

ಎಸ್.ಎಸ್. ಖಾದ್ರಿಗೆ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದಿಂದ ಪಿಎಚ್.ಡಿ. ಪದವಿ

ತೇಜಸಿ-ಶ್ರೀಕೃಷ್ಣಹಾಲನಹಳ್ಳಿ ಕೃತಿಗಳ ಪರಿಸರ ಪ್ರಜ್ಞೆ ಕುರಿತು ಮಹತ್ವದ ಸಂಶೋಧನೆ

❏ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ನಗರದ ಪ್ರಖ್ಯಾತ ಮುಸ್ಲಿಂ ಮುಖಂಡರಾಗಿದ್ದ ದಿವಂಗತ ಡಾ. ಸಯ್ಯದ್ ಹುಸ್ಸಾಮುದ್ದೀನ್ ಖಾದ್ರಿ ಅವರ ಪುತ್ರರಾದ ಶ್ರೀ ಎಸ್.ಎಸ್. ಖಾದ್ರಿ ಅವರು ಶೈಕ್ಷಣಿಕ ಹಾಗೂ ಸಂಶೋಧನಾ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡಿದ್ದಾರೆ. ಅವರು ಮಂಡಿಸಿದ ``Eco Aesthetics and Consciousness of Nature in the Select Works of Poornachandra Tejaswi and Sri Krishna Halanahalli" ಎಂಬ ವಿಷಯದ ಮಹಾಪ್ರಬಂಧಕ್ಕೆ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ ಪಿಎಚ್.ಡಿ. ಪದವಿ ಪ್ರಧಾನ ಮಾಡಿದೆ.

ಆಂಗ್ಲ ಭಾಷಾ ವಿಭಾಗದ ಪ್ರಾಧ್ಯಾಪಕರಾದ ಡಾ. ಸಂತೋಷ ಜಿ.ಕೆ. ಅವರ ಸಮರ್ಥ ಮಾರ್ಗದರ್ಶನದಲ್ಲಿ ಎಸ್.ಎಸ್. ಖಾದ್ರಿ ಅವರು ತಮ್ಮ ಸಂಶೋಧನೆಯನ್ನು ಪೂರ್ಣಗೊಳಿಸಿದ್ದಾರೆ. ಕನ್ನಡ ಸಾಹಿತ್ಯ ಲೋಕದಲ್ಲಿ ವಿಶಿಷ್ಟ ಸ್ಥಾನ ಪಡೆದಿರುವ ಪೂರ್ಣಚಂದ್ರ ತೇಜಸ್ವಿ ಹಾಗೂ ಶ್ರೀಕೃಷ್ಣ ಹಾಲನಹಳ್ಳಿ ಅವರ ಆಯ್ದ ಕೃತಿಗಳನ್ನು ಆಧಾರವಾಗಿಟ್ಟುಕೊಂಡು ಪ್ರಕೃತಿ, ಪರಿಸರ, ಪರಿಸರ ಸೌಂದರ್ಯ ಹಾಗೂ ಮಾನವ



ಮತ್ತು ಪ್ರಕೃತಿಯ ನಡುವಿನ ಅವಿನಾಭಾವ ಸಂಬಂಧವನ್ನು ಆಂಗ್ಲ ಭಾಷೆಯ ಸಾಹಿತ್ಯಿಕ ಮತ್ತು ವಿಮರ್ಶಾತ್ಮಕ ದೃಷ್ಟಿಕೋನದಿಂದ ಈ ಸಂಶೋಧನೆಯಲ್ಲಿ ಅಧ್ಯಯನ ಮಾಡಲಾಗಿದೆ. ಪ್ರಕೃತಿಯೊಂದಿಗೆ ಮನುಷ್ಯನ ಸಂಬಂಧ, ಪರಿಸರ ಸಂರಕ್ಷಣೆಯ ಅಗತ್ಯತೆ, ಪ್ರಕೃತಿಯ ಸೌಂದರ್ಯವನ್ನು ಸಾಹಿತ್ಯದಲ್ಲಿ ಬಿಂಬಿಸಿರುವ ರೀತಿ ಸೇರಿದಂತೆ ಹಲವು ಆಯಾಮಗಳನ್ನು ಸಂಶೋಧನೆಯಲ್ಲಿ ವಿಶ್ಲೇಷಿಸಲಾಗಿದೆ.

ಕನ್ನಡದ ಪ್ರಮುಖ ಸಾಹಿತಿಗಳ ಕೃತಿಗಳನ್ನು ಆಂಗ್ಲ ಭಾಷೆಯ ಮೂಲಕ ಅಧ್ಯಯನ ಮಾಡಿ ಸಂಶೋಧನಾ ಕ್ಷೇತ್ರಕ್ಕೆ ಕೊಡುಗೆ ನೀಡಿರುವುದು ಈ ಮಹಾಪ್ರಬಂಧದ ಪ್ರಮುಖ ವಿಶೇಷತೆಯಾಗಿದೆ. ವಿಶೇಷವಾಗಿ, ಪೂರ್ಣಚಂದ್ರ ತೇಜಸ್ವಿ ಮತ್ತು ಶ್ರೀಕೃಷ್ಣ ಹಾಲನಹಳ್ಳಿ ಅವರ ಸಾಹಿತ್ಯ ಕೃತಿಗಳಲ್ಲಿನ ಪರಿಸರ ಸೌಂದರ್ಯ ಮತ್ತು ಪ್ರಕೃತಿ ಪ್ರಜ್ಞೆಯನ್ನು ಕೇಂದ್ರವಾಗಿಟ್ಟುಕೊಂಡು ಆಂಗ್ಲ ಭಾಷೆಯಲ್ಲಿ ಕೈಗೊಂಡಿರುವ ಮೊದಲ ಮಹಾಪ್ರಬಂಧ ಇದಾಗಿದೆ ಎಂಬುದು ಸಂಶೋಧನೆಯ ಮಹತ್ವವನ್ನು ಮತ್ತಷ್ಟು ಹೆಚ್ಚಿಸಿದೆ.

ಎಸ್.ಎಸ್. ಖಾದ್ರಿ ಅವರು ಪ್ರಸ್ತುತ ವಿಜಯಪುರ ಜಿಲ್ಲೆಯ ಸಿಂದಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಂಗ್ಲ ಭಾಷೆಯ ಸಹಾಯಕ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಬೋಧನಾ ವೃತ್ತಿಯ ಜೊತೆಗೆ ಸಾಹಿತ್ಯ ಮತ್ತು ಸಂಶೋಧನಾ ಕ್ಷೇತ್ರದಲ್ಲಿ ಆಸಕ್ತಿ ಬೆಳೆಸಿಕೊಂಡಿರುವ ಅವರು, ಕನ್ನಡ ಸಾಹಿತ್ಯದ ಮಹತ್ವದ ಕೃತಿಗಳನ್ನು ಆಂಗ್ಲ ಭಾಷೆಯ ಸಂಶೋಧನಾ ವಲಯಕ್ಕೆ ಪರಿಚಯಿಸುವ ನಿಟ್ಟಿನಲ್ಲಿ ಈ ಅಧ್ಯಯನವನ್ನು ಕೈಗೊಂಡಿದ್ದಾರೆ. ಅವರ ಶೈಕ್ಷಣಿಕ ಬದುಕಿನ ಆರಂಭವೂ ಸಿಂಧನೂರಿನೊಂದಿಗೇ ನಂಟು ಹೊಂದಿದೆ. ಅವರು ಸಿಂಧನೂರಿನ ಸರ್ಕಾರಿ ಪದವಿ ಮಹಾವಿದ್ಯಾಲಯದಲ್ಲಿ ಪದವಿ ಶಿಕ್ಷಣವನ್ನು ಪೂರ್ಣಗೊಳಿಸಿದ್ದು, ಇದೀಗ ಅದೇ ಶೈಕ್ಷಣಿಕ ಪಯಣವನ್ನು ಮುಂದುವರಿಸಿಕೊಂಡು ಸಂಶೋಧನಾ ಕ್ಷೇತ್ರದಲ್ಲಿ ಡಾಕ್ಟರೇಟ್ ಪದವಿ ಗಳಿಸಿರುವುದು ಸಿಂಧನೂರಿನ ಶೈಕ್ಷಣಿಕ ವಲಯಕ್ಕೆ ಹೆಮ್ಮೆಯ ಸಂಗತಿಯಾಗಿದೆ.

ಸಂಶೋಧನೆಯ ಯಶಸ್ಸಿನ ಹಿನ್ನೆಲೆಯಲ್ಲಿ ಎಸ್.ಎಸ್. ಖಾದ್ರಿ ಅವರ ಕುಟುಂಬದ ಸದಸ್ಯರು, ಖಾದ್ರಿ ಸಹೋದರರು, ಸ್ನೇಹಿತರು, ಸಹೋದ್ಯೋಗಿಗಳು ಹಾಗೂ ಹಿತೈಷಿಗಳು ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ. ಅವರ ಮುಂದಿನ ಶೈಕ್ಷಣಿಕ, ಸಾಹಿತ್ಯಿಕ ಮತ್ತು ಸಂಶೋಧನಾ ಚಟುವಟಿಕೆಗಳು ಇನ್ನಷ್ಟು ಯಶಸ್ವಿಯಾಗಲಿ ಎಂದು ಶುಭ ಹಾರೈಸಿದ್ದಾರೆ. ಗ್ರಾಮೀಣ ಹಿನ್ನೆಲೆಯಿಂದ ಉನ್ನತ ಶಿಕ್ಷಣದ ಹಂತದವರೆಗೆ ಸಾಗಿ, ಬೋಧನಾ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಾ ಸಂಶೋಧನೆಯ ಮೂಲಕ ಡಾಕ್ಟರೇಟ್ ಪದವಿ ಗಳಿಸಿರುವ ಎಸ್.ಎಸ್. ಖಾದ್ರಿ ಅವರ ಸಾಧನೆ ಯುವ ಸಂಶೋಧಕರು ಹಾಗೂ ವಿದ್ಯಾರ್ಥಿಗಳಿಗೆ ಪ್ರೇರಣಾದಾಯಕವಾಗಿದೆ.

ವಚನಗಳ ಮೂಲಕ ವ್ಯಸನಮುಕ್ತ ಸಮಾಜ ನಿರ್ಮಾಣದ ಸಂಕಲ್ಪ

"ವ್ಯಸನಮುಕ್ತ ಬದುಕಿಗಾಗಿ ವಚನ ಶ್ರವಣ 2026" ಸಮಾರೋಪ ಸಮಾರಂಭದಲ್ಲಿ ಶಾಸಕ ಹಂಪನಗೌಡ ಬಾದರ್ಲಿ

❏ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ವಚನಗಳಲ್ಲಿರುವ ಮಾನವೀಯ ಮೌಲ್ಯಗಳು ಹಾಗೂ ಶರಣರ ಜೀವನ ಸಂದೇಶಗಳನ್ನು ಜನರಿಗೆ ತಲುಪಿಸುವುದರೊಂದಿಗೆ ವ್ಯಸನಮುಕ್ತ ಬದುಕಿನ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಸಿಂಧನೂರಿನ ಶರಣ ನೀಲಾಂಬಿಕೆ ಪ್ರಸಾದ ನಿಲಯದಲ್ಲಿ ಆಯೋಜಿಸಲಾಗಿದ್ದ "ವ್ಯಸನಮುಕ್ತ ಬದುಕಿಗಾಗಿ ವಚನ ಶ್ರವಣ2026" ಕಾರ್ಯಕ್ರಮದ ಸಮಾರೋಪ ಸಮಾರಂಭವು ಅರ್ಥಪೂರ್ಣವಾಗಿ ಜರುಗಿತು.

ಸಮಾರೋಪ ಸಮಾರಂಭದಲ್ಲಿ ಶಾಸಕ ಹಂಪನಗೌಡ ಬಾದರ್ಲಿ ಅವರು ಭಾಗವಹಿಸಿ, ವಚನ ಶ್ರವಣದ ಮೂಲಕ ಸಮಾಜದಲ್ಲಿ ಸದಾಚಾರ, ಶಾಂತಿ, ಸಹಬಾಳ್ವೆ ಹಾಗೂ ವ್ಯಸನಮುಕ್ತ ಜೀವನದ ಅರಿವು ಮೂಡಿಸುವ ಕಾರ್ಯಕ್ರಮದ ಉದ್ದೇಶಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ವಚನ ಸಾಹಿತ್ಯವು ಮನುಷ್ಯನ ಬದುಕನ್ನು ಉತ್ತಮ ದಿಕ್ಕಿನತ್ತ ಕೊಂಡೊಯ್ಯುವ ಮಾರ್ಗದರ್ಶಕ ಶಕ್ತಿಯಾಗಿದೆ. ಶರಣರು ತಮ್ಮ ವಚನಗಳ ಮೂಲಕ ಸಮಾಜದಲ್ಲಿದ್ದ ಅಸಮಾನತೆ, ಅಂಧಶ್ರದ್ಧೆ, ಅನೈತಿಕತೆ ಹಾಗೂ ದುಶ್ಚಟಗಳ ವಿರುದ್ಧ ಧ್ವನಿ ಎತ್ತಿ, ಸಮಾನತೆ ಮತ್ತು



ಮಾನವೀಯತೆಯ ಸಂದೇಶವನ್ನು ಸಾರಿದ್ದಾರೆ. ಆ ಸಂದೇಶಗಳು ಇಂದಿನ ಆಧುನಿಕ ಸಮಾಜಕ್ಕೂ ಅತ್ಯಂತ ಪ್ರಸ್ತುತವಾಗಿವೆ ಎಂದು ಹೇಳಿದರು. ಯುವಜನತೆಯ ಭವಿಷ್ಯಕ್ಕೆ ವ್ಯಸನ ದೊಡ್ಡ ಸವಾಲು ವ್ಯಸನವು ವ್ಯಕ್ತಿಯ ವೈಯಕ್ತಿಕ ಬದುಕನ್ನು ಮಾತ್ರವಲ್ಲದೆ ಇಡೀ ಕುಟುಂಬದ ನೆಮ್ಮದಿಯನ್ನು ಕಸಿದುಕೊಳ್ಳುವ ಸಾಮಾಜಿಕ ಪಿಡುಗಾಗಿದೆ. ಯುವಕರು ದುಶ್ಚಟಗಳಿಗೆ ಬಲಿಯಾಗದೆ ತಮ್ಮ ಶಕ್ತಿ ಮತ್ತು ಸಾಮರ್ಥ್ಯವನ್ನು ಶಿಕ್ಷಣ, ಉದ್ಯೋಗ, ಕ್ರೀಡೆ, ಕಲೆ ಹಾಗೂ ಸಮಾಜ ಸೇವೆಯಂತಹ ಸಕಾರಾತ್ಮಕ ಕ್ಷೇತ್ರಗಳಲ್ಲಿ ಬಳಸಿಕೊಳ್ಳಬೇಕು ಎಂದು ಶಾಸಕ ಹಂಪನಗೌಡ ಬಾದರ್ಲಿ ಕರೆ ನೀಡಿದರು.

ಪೋಷಕರು ತಮ್ಮ ಮಕ್ಕಳೊಂದಿಗೆ ಆತ್ಮೀಯವಾಗಿ ಸಂವಹನ ನಡೆಸಬೇಕು. ಶಿಕ್ಷಕರು ಹಾಗೂ ಸಮಾಜದ ಹಿರಿಯರು ಯುವಜನತೆಗೆ ಉತ್ತಮ ಮಾರ್ಗದರ್ಶನ ನೀಡಬೇಕು. ವ್ಯಸನಮುಕ್ತ ಸಮಾಜ ನಿರ್ಮಾಣವು ಕೇವಲ ಒಬ್ಬ ವ್ಯಕ್ತಿ ಅಥವಾ ಒಂದು ಸಂಸ್ಥೆಯ ಜವಾಬ್ದಾರಿಯಲ್ಲ; ಕುಟುಂಬ, ಶಿಕ್ಷಣ ಸಂಸ್ಥೆಗಳು, ಧಾರ್ಮಿಕ ಮತ್ತು ಸಾಮಾಜಿಕ ಸಂಘಟನೆಗಳು ಹಾಗೂ ಸಾರ್ವಜನಿಕರು ಒಟ್ಟಾಗಿ ಕೈಜೋಡಿಸಬೇಕಾದ ಸಾಮಾಜಿಕ ಹೊಣೆಗಾರಿಕೆಯಾಗಿದೆ ಎಂದು ಅವರು ಹೇಳಿದರು.

ವಚನಗಳ ಸಂದೇಶ ಜೀವನದ ಭಾಗವಾಗಲಿ ವಚನಗಳನ್ನು ಕೇಳುವುದು ಅಥವಾ ಓದುವುದರ ಜೊತೆಗೆ ಅವುಗಳಲ್ಲಿರುವ ತತ್ವಗಳನ್ನು ನಮ್ಮ ದಿನನಿತ್ಯದ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಕಾಯಕಕ್ಕೆ ಗೌರವ, ಸತ್ಯನಿಷ್ಠೆ, ಸರಳತೆ, ಪರಸ್ಪರ ಗೌರವ, ದಯೆ, ಸಹಾನುಭೂತಿ ಹಾಗೂ ಮಾನವೀಯತೆ ಇವುಗಳನ್ನು ಜೀವನದ ಮೌಲ್ಯಗಳನ್ನಾಗಿ ಮಾಡಿಕೊಂಡಾಗ ಉತ್ತಮ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ ಎಂದರು.

"ವ್ಯಸನಮುಕ್ತ ಬದುಕಿಗಾಗಿ ವಚನ ಶ್ರವಣ 2026" ಕಾರ್ಯಕ್ರಮವು ಕೇವಲ ಧಾರ್ಮಿಕ ಅಥವಾ ಸಾಹಿತ್ಯಿಕ ಕಾರ್ಯಕ್ರಮವಾಗಿರದೆ, ವ್ಯಕ್ತಿಯ ಬದುಕಿನಲ್ಲಿ ಸಕಾರಾತ್ಮಕ ಪರಿವರ್ತನೆ ತರಲು ಹಾಗೂ ಸಮಾಜದಲ್ಲಿ ಆರೋಗ್ಯಕರ ವಾತಾವರಣ ನಿರ್ಮಿಸಲು ಪ್ರೇರಣೆ ನೀಡುವ ಜಾಗೃತಿ ವೇದಿಕೆಯಾಗಿದೆ ಎಂದು ಅವರು ಹೇಳಿದರು.

ಸಮಾರೋಪ ಸಮಾರಂಭದಲ್ಲಿ ವಚನ ಗಾಯನ, ವಚನ ಶ್ರವಣ ಹಾಗೂ ಶರಣರ ಸಂದೇಶಗಳ ಮೂಲಕ ವ್ಯಸನಮುಕ್ತ ಜೀವನದ ಮಹತ್ವವನ್ನು ಸಾರಲಾಯಿತು. ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದವರು ವ್ಯಸನಗಳಿಂದ ದೂರವಿದ್ದು, ಆರೋಗ್ಯಕರ, ಶಾಂತಿಯುತ ಮತ್ತು ಮೌಲ್ಯಾಧಾರಿತ ಜೀವನ ನಡೆಸುವ ಸಂಕಲ್ಪಕ್ಕೆ ಸಾಕ್ಷಿಯಾದರು.

ಕಾರ್ಯಕ್ರಮದ ಸಂದರ್ಭದಲ್ಲಿ ಶಾಸಕ ಹಂಪನಗೌಡ ಬಾದರ್ಲಿ ಅವರು ಆಯೋಜಕರನ್ನು ಅಭಿನಂದಿಸಿ, ಸಮಾಜದ ಆರೋಗ್ಯ ಮತ್ತು ಯುವಜನರ ಭವಿಷ್ಯದ ಹಿತದೃಷ್ಟಿಯಿಂದ ಇಂತಹ ಜಾಗೃತಿ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು ಎಂದು ಆಶಿಸಿದರು. ಕಾರ್ಯಕ್ರಮದಲ್ಲಿ ವಚನಾಭಿಮಾನಿಗಳು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಗಣ್ಯರು, ಸಾರ್ವಜನಿಕರು ಹಾಗೂ ಯುವಜನರು ಭಾಗವಹಿಸಿದ್ದರು.

ವಚನ ದರ್ಶನ

ಎನ್ನ ಕಾಯವ ದಂಡಿಗೆಯ ಮಾಡಯ್ಯಾ ಎನ್ನ ಶಿರವ ಸೋರೆಯ ಮಾಡಯ್ಯಾ ಎನ್ನ ನರವ ತಂತಿಯ ಮಾಡಯ್ಯಾ, ಎನ್ನ ಬೆರಳ ಕಡ್ಡಿಯ ಮಾಡಯ್ಯಾ ಬತ್ತೀಸ ರಾಗವ ಹಾಡಯ್ಯಾ, ಉರದಲೊತ್ತಿ ಬಾರಿಸು,ಕೂಡಲಸಂಗಮದೇವಾ

12 ನೇ ಶತಮಾನದ ಶರಣರಾದ ವಿಶ್ವಗುರು ಬಸವಣ್ಣನವರ ಅತ್ಯಂತ ಪ್ರಸಿದ್ಧವಾದ ಹಾಗೂ ಸುಂದರವಾದ ವಚನವಾಗಿದೆ. ಈ ವಚನದಲ್ಲಿ ವಿಶ್ವಗುರು ಬಸವಣ್ಣನವರು ತಮ್ಮ ಸಂಪೂರ್ಣ ದೇಹವನ್ನು ದೇವರ ಸೇವೆಗೆ ಅರ್ಪಿಸಿಕೊಳ್ಳುವಂತೆ ಮತ್ತು ದೇವನೇ ಅದನ್ನು ನುಡಿಸುವಂತೆ ಬೇಡಿಕೊಂಡಿದ್ದಾರೆ.

ಈ ವಚನದಲ್ಲಿ ಬಸವಣ್ಣನವರು ತಮ್ಮನ್ನು ತಾವು ದೇವರ ಕೈಯಲ್ಲಿರುವ 'ದಂಡಿಗೆ' ಇಂದಿನ ವೀಣೆಯಂತಹ ಒಂದು ತಂತಿ ವಾದ್ಯ ಮಾಡಲು ಕೇಳಿಕೊಳ್ಳುತ್ತಿದ್ದಾರೆ.

ದೇಹ ಮತ್ತು ಶಿರ ನನ್ನ ದೇಹವನ್ನು ವಾದ್ಯದ ದಂಡವನ್ನಾಗಿಯೂ, ನನ್ನ ತಲೆಯನ್ನು ವಾದ್ಯಕ್ಕೆ ಬಳಸುವ ಒಣಗಿದ ಸೋರೆಕಾಯಿಯ ಬುರುಡೆಯನ್ನಾಗಿಯೂ ಮಾಡು.ನರ ಮತ್ತು ಬೆರಳು: ನನ್ನ ದೇಹದ ನರಗಳನ್ನು ಆ ವಾದ್ಯದ ತಂತಿಗಳನ್ನಾಗಿ ಮಾಡು ಮತ್ತು ನನ್ನ ಬೆರಳುಗಳನ್ನೇ ಅದನ್ನು ನುಡಿಸುವ ಕಡ್ಡಿಯನ್ನಾಗಿ ಪರಿವರ್ತಿಸು.ಸಂಗೀತದ ನಾದ: ಹೇ ಕೂಡಲಸಂಗಮದೇವ, ನನ್ನನ್ನು ನಿನ್ನ ಎದೆಗೆ ಒತ್ತಿ ಹಿಡಿದು, ನಿನಗೆ ಇಷ್ಟ ಬಂದಂತೆ ಮೂವತ್ತೆರಡು ಬತ್ತೀಸ ರಾಗಗಳನ್ನು ಮಂಜುಳವಾಗಿ ನುಡಿಸು. ನನ್ನ ಜೀವನದ ಪ್ರತಿ ಕ್ಷಣವೂ ನಿನ್ನ ನಾದಮಯವಾಗಿರಲಿ ಎಂಬುದು ಇದರ ಆಶಯವಾಗಿದೆ.ಅಂದರೆ, "ನನ್ನಲ್ಲಿ ಯಾವುದೇ ಅಹಂಕಾರ ಉಳಿಯಬಾರದು, ನಾನು ಸಂಪೂರ್ಣವಾಗಿ ನಿನ್ನ ಇಚ್ಛೆಯಂತೆ ನಡೆಯುವ ನಿಮಿತ್ತ ಮಾತ್ರನಾಗಬೇಕು" ಎಂಬ ಪರಮ ಭಕ್ತಿಯ ಶರಣಾಗತಿಯ ಭಾವ ಇಲ್ಲಿದೆ. ಇಂಥಹ ವಚನಗಳು ಮನುಕುಲಕ್ಕೆ ದಾರಿದೀಪವಾಗಿವೆ. ನಾವು ನೀವು ವಚನದ ದಾರಿಯಲ್ಲಿ ಸಾಗೋಣ ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ-ಸಿಂಧನೂರು. 998094144

ಸಿಂಧನೂರಿನಲ್ಲಿ ಅಂತರರಾಜ್ಯ ಕಳ್ಳನ ಬಂಧನ

25.50 ಲಕ್ಷ ಮೌಲ್ಯದ ಚಿನ್ನ, ಬೆಳ್ಳಿ ಆಭರಣ ಹಾಗೂ ನಗದು ವಶ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಮನೆಗೆ ಬೀಗ ಹಾಕಿಕೊಂಡು ಹೊರಗೆ ಹೋಗಿದ್ದ ಸಂದರ್ಭದಲ್ಲಿ ಮನೆ ಬೀಗ ಮುರಿದು ಚಿನ್ನಾಭರಣ, ಬೆಳ್ಳಿ ಆಭರಣ ಹಾಗೂ ನಗದು ಕಳ್ಳತನ ಮಾಡಿದ್ದ ಪ್ರಕರಣ-ಕ್ಕೆ ಸಂಬಂಧಿಸಿದಂತೆ ಸಿಂಧನೂರು ಗ್ರಾಮೀಣ ಪೊಲೀಸರು ಅಂತರರಾಜ್ಯ ಕಳ್ಳನೊಬ್ಬನನ್ನು ಬಂಧಿಸಿ, ಆತನಿಂದ ಸುಮಾರು ?25.50 ಲಕ್ಷ ಮೌಲ್ಯದ ಚಿನ್ನ, ಬೆಳ್ಳಿ ಆಭರಣ ಹಾಗೂ ನಗದು ಹಣವನ್ನು ವಶಪಡಿಸಿಕೊಂಡಿದ್ದಾರೆ.

ಸಿಂಧನೂರು ತಾಲೂಕಿನ ಲಕ್ಷ್ಮೀ ಕ್ಯಾಂಪ್ ನಿವಾಸಿ ಎಸ್. ಶ್ರೀನಿವಾಸ (52) ಅವರು ಆಗಸ್ಟ್ 29ರಂದು ಸಂಜೆ 5 ಗಂಟೆಗೆ ತಮ್ಮ ಮನೆಗೆ ಬೀಗ ಹಾಕಿಕೊಂಡು ವೈಯಕ್ತಿಕ ಕಾರ್ಯಕ್ರಮಕ್ಕೆ ತೆರಳಿದ್ದರು. ಆಗಸ್ಟ್ 31ರಂದು ರಾತ್ರಿ 8 ಗಂಟೆಗೆ ಮನೆಗೆ ಹಿಂದಿರುಗಿದಾಗ ಮನೆಯ ಬೀಗ ಮುರಿದಿರುವುದು ಕಂಡುಬಂದಿತ್ತು. ಮನೆಯ ಬೆಡ್‌ರೂಮ್‌ನಲ್ಲಿದ್ದ ಟ್ರೆಜರಿಯ ಬೀಗವನ್ನೂ ಮುರಿದು ಅದರಲ್ಲಿದ್ದ 79 ಗ್ರಾಂ ಚಿನ್ನಾಭರಣ, 980 ಗ್ರಾಂ ಬೆಳ್ಳಿ ಆಭರಣ ಹಾಗೂ ?3.14 ಲಕ್ಷ ನಗದು ಕಳ್ಳತನವಾಗಿರುವುದು ಬೆಳಕಿಗೆ ಬಂದಿತ್ತು.

ಈ ಕುರಿತು ಸಿಂಧನೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ.333/2026, ಕಲಂ 331(1), 331(4), 305 ಬಿಎನ್-



ಎಸ್-2023ರ ಅಡಿಯಲ್ಲಿ ಪ್ರಕರಣ ದಾಖಲಾಗಿತ್ತು. ವಿಶೇಷ ತಂಡ ರಚಿಸಿ ಕಾರ್ಯಾಚರಣೆ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ರಾಯಚೂರು ಜಿಲ್ಲಾ ಪೊಲೀಸ್ ಇಲಾಖೆ ಆರೋಪಿಯ ಪತ್ತೆಗಾಗಿ ವಿಶೇಷ ತಂಡವನ್ನು ರಚಿಸಿತ್ತು. ರಾಯಚೂರು ಪೊಲೀಸ್ ಅಧೀಕ್ಷಕರಾದ ಅರುಣಾಂಗುಗಿರಿ, ಐಪಿಎಸ್, ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಜಿ. ಹರೀಶ ಹಾಗೂ ಸಿಂಧನೂರು ಡಿವೈಎಸ್‌ಪಿ ಚಂದ್ರಶೇಖರ ಜಿ. ಅವರ ಮಾರ್ಗದರ್ಶನದಲ್ಲಿ ಸಿಂಧನೂರು ಗ್ರಾಮೀಣ ವೃತ್ತದ ಸಿಪಿಐ ವಿನಾಯಕ ಅವರ ನೇತೃತ್ವದಲ್ಲಿ ಕಾರ್ಯಾಚರಣೆ ನಡೆಸಲಾಯಿತು.

ತಂಡದಲ್ಲಿ ಸಿಂಧನೂರು ಗ್ರಾಮೀಣ ಠಾಣೆಯ ಪಿಎಸ್‌ಐ ಮೌನೇಶ ರಾಠೋಡ, ಬಳಗಾನೂರು ಠಾಣೆಯ ಪಿಎಸ್‌ಐ ಎರಿಯಪ್ಪ, ತುರವಿಹಾಳ ಠಾಣೆಯ ಪಿಎಸ್‌ಐ ಸುಜಾತ ಎನ್. ಹಾಗೂ ಪೊಲೀಸ್ ಸಿಬ್ಬಂದಿ ಮತ್ತು ಸಿಡಿಆರ್ ಸೆಲ್‌ನ ತಾಂತ್ರಿಕ ಸಹಾಯಕರು ಕಾರ್ಯನಿರ್ವಹಿಸಿದರು. ನಿರಂತರ ತನಿಖೆ ಹಾಗೂ ತಾಂತ್ರಿಕ ಮಾಹಿತಿ ಆಧರಿಸಿ ಕಾರ್ಯಾಚರಣೆ ನಡೆಸಿದ ವಿಶೇಷ ತಂಡವು ಆಂಧ್ರಪ್ರದೇಶದ ಪಶ್ಚಿಮ ಗೋದಾವರಿ ಜಿಲ್ಲೆಯ ತಣಕು ಮಂಡಲದ ಪೈಡಿಪುರ ಗ್ರಾಮದ ನಿವಾಸಿ ಬಂಡಿ ದುರ್ಗಾ ಪ್ರಸಾದ @ ದೊಂಗನಾನಿ (34) ಎಂಬಾತನನ್ನು ಬಂಧಿಸಿದೆ.

ಐದು ಪ್ರಕರಣಗಳಲ್ಲಿ ಕಳ್ಳತನ ಒಪ್ಪಿಕೊಂಡ ಆರೋಪಿತ ಪೊಲೀಸರ ವಿಚಾರಣೆ ವೇಳೆ ಆರೋಪಿಯು ಸಿಂಧನೂರು ಗ್ರಾಮೀಣ ಪೊಲೀಸ್ ಠಾಣೆಯ ಮೂರು ಪ್ರಕರಣಗಳು ಹಾಗೂ ತುರವಿಹಾಳ ಪೊಲೀಸ್ ಠಾಣೆಯ ಎರಡು ಪ್ರಕರಣಗಳಲ್ಲಿ ಮನೆ ಕಳ್ಳತನ ಮಾಡಿರುವುದಾಗಿ ಒಪ್ಪಿಕೊಂಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿತನಿಂದ ವಿವಿಧ ಪ್ರಕರಣಗಳಿಗೆ ಸಂಬಂಧಿಸಿದಂತೆ ಸುಮಾರು 140 ಗ್ರಾಂ ಚಿನ್ನದ ಆಭರಣಗಳು, ಸುಮಾರು 2,500 ಗ್ರಾಂ ಬೆಳ್ಳಿ ಆಭರಣಗಳು ಹಾಗೂ 45,000 ನಗದು ವಶಪಡಿಸಿಕೊಳ್ಳಲಾಗಿದೆ. ವಶಪಡಿಸಿಕೊಂಡ ವಸ್ತುಗಳ ಒಟ್ಟು ಮೌಲ್ಯ ಸುಮಾರು 25.50 ಲಕ್ಷ ಎಂದು ಪೊಲೀಸ್ ಇಲಾಖೆ ತಿಳಿಸಿದೆ.

ಪೊಲೀಸ್ ತಂಡಕ್ಕೆ ಎಸ್‌ಪಿ ಶ್ಲಾಘನೆ ಅಂತರರಾಜ್ಯ ಮಟ್ಟದಲ್ಲಿ ಸಂಚರಿಸಿ ಮನೆ ಕಳ್ಳತನ ಮಾಡುತ್ತಿದ್ದ ಆರೋಪಿತನನ್ನು ಪತ್ತೆಹಚ್ಚಿ ಬಂಧಿಸುವಲ್ಲಿ ಯಶಸ್ವಿಯಾದ ಸಿಂಧನೂರು ಗ್ರಾಮೀಣ ಪೊಲೀಸ್ ಠಾಣೆಯ ವಿಶೇಷ ತಂಡದ ಕಾರ್ಯವನ್ನು ರಾಯಚೂರು ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಅರುಣಾಂಗುಗಿರಿ, ಐಪಿಎಸ್ ಅವರು ಶ್ಲಾಘಿಸಿದ್ದಾರೆ. ತಂಡದ ಅಧಿಕಾರಿ ಮತ್ತು ಸಿಬ್ಬಂದಿಯ ಕಾರ್ಯಕ್ಕೆ ಬಹುಮಾನವನ್ನೂ ಘೋಷಿಸಿದ್ದಾರೆ.

ಪ್ರಕರಣದ ತನಿಖೆ ಮುಂದುವರಿದಿದ್ದು, ಆರೋಪಿತನಿಂದ ವಶಪಡಿಸಿಕೊಂಡಿರುವ ಆಭರಣಗಳು ಮತ್ತು ನಗದು ಹಣವು ಸಂಬಂಧಿಸಿದ ಇತರ ಪ್ರಕರಣಗಳೊಂದಿಗೆ ಪರಿಶೀಲಿಸಲಾಗುತ್ತಿದೆ ಎಂದು ಪೊಲೀಸ್ ಇಲಾಖೆ ತಿಳಿಸಿದೆ.

ಶಿಕ್ಷಣದಿಂದ ದೇಶದ ಅಭಿವೃದ್ಧಿ ಸಾಧ್ಯ: ಶಿವರಾಜ ನಾಯಕ ಸಾಹುಕಾರ

❑ ನೈಜ್ಯ ದೆಸೆ ನ್ಯೂಸ್

ಮಾನ್ವಿ: ಶಿಕ್ಷಣವನ್ನು ಪ್ರತಿಯೊಬ್ಬರೂ ಪಡೆದುಕೊಂಡಾಗ ಮಾತ್ರ ದೇಶ ಅಭಿವೃದ್ಧಿಯತ್ತ ಸಾಗುತ್ತದೆ ಎಂದು ಶಾಸಕರ ಸುಪುತ್ರ ಶಿವರಾಜ ನಾಯಕ ಸಾಹುಕಾರ ಹೇಳಿದರು.ಪಟ್ಟಣದ ಶ್ರೀ ಗುರುದೇವ ಪಬ್ಲಿಕ್ ಶಾಲೆಯಲ್ಲಿ ನಡೆದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಶಿಕ್ಷಕರು ವಿದ್ಯಾರ್ಥಿಗಳನ್ನು ತಿದ್ದಿ-ತೀಡಿ ಅವರ ಬಾಳಿಗೆ ಬೆಳಕಾಗುವ ಮಹತ್ತರವಾದ ಪಾತ್ರವನ್ನು ವಹಿಸುತ್ತಾರೆ. ಆದ್ದರಿಂದ ಪ್ರತಿಯೊಬ್ಬ ವಿದ್ಯಾರ್ಥಿಯೂ ತಮ್ಮ ಗುರುಗಳನ್ನು ಗೌರವಿಸಬೇಕು ಎಂದು ಕರೆ ನೀಡಿದರು.ಮುಖ್ಯ ಅತಿಥಿ-ಯಾಗಿ ಭಾಗವಹಿಸಿದ್ದ ಪ್ರಾಣೇಶ್ ಮಾತನಾಡಿ, ಶಿಕ್ಷಕರು ಬೋಧಿಸುವ ಜ್ಞಾನವನ್ನು ಅಳವಡಿಸಿಕೊಂಡು ಉತ್ತಮ ವಿದ್ಯಾರ್ಥಿಗಳಾಗಬೇಕು. ಜೊತೆಗೆ ಉತ್ತಮ ನೈತಿಕ ಮೌಲ್ಯಗಳನ್ನು ಜೀವನದಲ್ಲಿ ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಮತ್ತೋರ್ವ ಅತಿಥಿ ಗಿರಿಜಾ ಮಾತನಾಡಿ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನದ ಅಂಗವಾಗಿ ಶಿಕ್ಷಕರ ದಿನಾಚರಣೆಯನ್ನು ಆಚರಿಸಲಾಗುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಣ್ಣ ರಾಮಯ್ಯ ಮಾತನಾಡಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಶಿಕ್ಷಣವು ಹುಲಿಯ ಹಾಲಿದ್ದಂತೆ ಅದನ್ನು ಕುಡಿದವರು ಘರ್ಜಿಸಲೇಬೇಕು ಎಂಬ ಮಾತನ್ನು ಉಲ್ಲೇಖಿಸಿ, ಶಿಕ್ಷಣವು ಜೀವನದಲ್ಲಿ ಅತ್ಯಂತ ಮಹತ್ವದ್ದಾಗಿದ್ದು, ಶಿಕ್ಷಕ-ರಿಗೆ ವಿದ್ಯಾರ್ಥಿಗಳು ಸದಾ ಗೌರವ ಸಲ್ಲಿಸಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಚನ್ನಬಸವ ನಾಯಕ ವಕೀಲರು, ಆಂಜನೇಯ ನಾಯಕ,ಲಲಿತಾ,ಅಮರೇಶ ನಂದಿಹಾಳ, ರಾಮಣ್ಣ ನಸಲಾಪುರ, ಶರಣಮ್ಮ, ಶಿಕ್ಷಕಿಯರಾದ ತಿಪ್ಪಮ್ಮ, ಮಹಾಂಕಾಳಿ, ಕಾವ್ಯ, ಅನಿತಾ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ವಿದ್ಯಾರ್ಥಿಯಾದ ರವಿತೇಜ್ ಕಾರ್ಯಕ್ರಮ ನಿರೂಪಿಸಿದರೆ ಚೇತನ್ ಸ್ವಾಗತಿಸಿದರೆ, ಮಹೇಶ್ ವಂದಿಸಿದರು.

ವಿಶೇಷ ಚೇತನರ ಸ್ವಾವಲಂಬನೆಗೆ ತ್ರಿಚಕ್ರ ವಾಹನಗಳು ಸಹಕಾರಿ: ಬಸನಗೌಡ ಬಾದರ್ಲಿ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ವಿಶೇಷ ಚೇತನರು ಯಾರ ಮೇಲೂ ಅವಲಂಬಿತರಾಗದೆ, ಸ್ವಾಭಿಮಾನದಿಂದ ತಮ್ಮ ಬದುಕನ್ನು ತಾವೇ ಕಟ್ಟಿಕೊಳ್ಳಲು ಅಗತ್ಯವಿರುವ ಸೌಲಭ್ಯ ಹಾಗೂ ಅವಕಾಶಗಳನ್ನು ಕಲ್ಪಿಸುವುದು ನಮ್ಮ ಆಶಯವಾಗಿದೆ ಎಂದು ವಿಧಾನಪರಿಷತ್ ಸದಸ್ಯ ಬಸನಗೌಡ ಬಾದರ್ಲಿ ಹೇಳಿದರು.

ಸಿಂಧನೂರಿನ ಜನಸ್ಪಂದನ ಕಾರ್ಯಾಲಯದಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಡಿ ಅರ್ಹ ವಿಶೇಷ ಚೇತನ ಫಲಾನುಭವಿಗಳಿಗೆ 5 ತ್ರಿಚಕ್ರ ವಾಹನಗಳನ್ನು ವಿತರಿಸಿ ಅವರು ಮಾತನಾಡಿದರು. ವಿಶೇಷ ಚೇತನರ ಜೀವನದಲ್ಲಿ ಸ್ವಾವಲಂಬನೆ ಅತ್ಯಂತ ಮಹತ್ವದ್ದಾಗಿದೆ. ದಿನನಿತ್ಯದ ಅಗತ್ಯಗಳಿಗೆ ಮತ್ತೊಬ್ಬರ ಸಹಾಯಕ್ಕಾಗಿ ಕಾಯಬೇಕಾದ ಪರಿಸ್ಥಿತಿ ಕಡಿಮೆಯಾಗಬೇಕು. ಸಂಚಾರದ ಸ್ವಾತಂತ್ರ್ಯ ದೊರೆತಾಗ ಶಿಕ್ಷಣ, ಉದ್ಯೋಗ, ಸ್ವಯಂ ಉದ್ಯೋಗ, ಆರೋಗ್ಯ ಸೇವೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಅವರು ಹೆಚ್ಚು ಸಕ್ರಿಯವಾಗಿ ತೊಡಗಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಸೌಲಭ್ಯಗಳು ಹಕ್ಕುದಾರರಿಗೆ ತಲುಪಬೇಕು ಸರ್ಕಾರ ವಿಶೇಷ ಚೇತನರ ಕಲ್ಯಾಣಕ್ಕಾಗಿ ಹಲವು ಯೋಜನೆಗಳು ಮತ್ತು ಸೌಲಭ್ಯಗಳನ್ನು ಜಾರಿಗೊಳಿಸುತ್ತಿದೆ. ಇಂತಹ ಯೋಜನೆಗಳ ಪ್ರಯೋಜನ ಅರ್ಹ ಫಲಾನುಭವಿಗಳಿಗೆ ತಲುಪಿದಾಗ ಮಾತ್ರ ಸರ್ಕಾರದ ಉದ್ದೇಶ ಈಡೇರಿದಂತಾಗುತ್ತದೆ. ಯಾವುದೇ ಅರ್ಹ ಫಲಾನುಭವಿ ಸರ್ಕಾರಿ ಸೌಲಭ್ಯಗಳಿಂದ ವಂಚಿತರಾಗದಂತೆ ಸಂಬಂಧಪಟ್ಟ ಅಧಿಕಾ-ರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಬಸನಗೌಡ ಬಾದರ್ಲಿ ಹೇಳಿದರು.

ವಿಶೇಷ ಚೇತನರು ಸಮಾಜದ ಮೇಲೆ ಹೊರೆಯಲ್ಲ; ಅವರಿಗೆ ಸೂಕ್ತ ಅವಕಾಶ, ತರಬೇತಿ ಮತ್ತು ಅಗತ್ಯ ಸೌಲಭ್ಯಗಳನ್ನು ಒದಗಿಸಿದರೆ ಅವರು ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಿ ಸಮಾಜದ ಅಭಿವೃದ್ಧಿಗೆ ಕೊಡುಗೆ ನೀಡಬಲ್ಲರು.





ಆದ್ದರಿಂದ ಅವರನ್ನು ಕರುಣೆಯಿಂದ ನೋಡುವ ಬದಲು ಸಮಾನ ಅವಕಾಶ ಮತ್ತು ಗೌರವದ ದೃಷ್ಟಿಯಿಂದ ನೋಡಬೇಕು ಎಂದರು.

ತ್ರಿಚಕ್ರವಾಹನದಿಂದ ಹೊಸಅವಕಾಶಗಳು ವಿತರಿಸಲಾದ ತ್ರಿಚಕ್ರ ವಾಹನಗಳು ಫಲಾನುಭವಿಗಳ ಸಂಚಾರಕ್ಕೆ ಮಾತ್ರ ಸೀಮಿತವಾಗದೆ, ಅವರ ಬದುಕಿನಲ್ಲಿ ಹೊಸ ಅವಕಾಶಗಳಿಗೆ ದಾರಿ ಮಾಡಿಕೊಡಬೇಕು. ಸ್ವಯಂ ಉದ್ಯೋಗ, ಸಣ್ಣ ವ್ಯಾಪಾರ, ಉದ್ಯೋಗ ಹಾಗೂ ಇತರ ಚಟುವಟಿಕೆಗಳಿಗೆ ತೆರಳಲು ಈ ವಾಹನಗಳು ನೆರವಾಗಲಿ ಎಂದು ಹಾರೈಸಿದರು.

"ಈ ವಾಹನಗಳು ಫಲಾನುಭವಿಗಳ ಕೈಗೆ ಬಂದಿರುವುದು ಕೇವಲ ಒಂದು ಸರ್ಕಾರಿ ಸೌಲಭ್ಯ ದೊರೆತಿರುವುದಷ್ಟೇ ಅಲ್ಲ; ಅವರ ಸ್ವಾತಂತ್ರ್ಯ ಮತ್ತು ಆತ್ಮವಿಶ್ವಾಸಕ್ಕೆ ಮತ್ತೊಂದು ಹೆಜ್ಜೆಯಾಗಿದೆ. ತಮ್ಮ ಕುಟುಂಬದ ಮೇಲೆ ಅವಲಂಬಿತರಾಗದೆ, ತಮ್ಮ ಅಗತ್ಯಗಳನ್ನು ತಾವೇ ಪೂರೈಸಿಕೊಳ್ಳುವ ಶಕ್ತಿ ಅವರಿಗೆ ದೊರೆಯಲಿ" ಎಂದು ಬಸನಗೌಡ ಬಾದರ್ಲಿ ಹೇಳಿದರು.

ಸಮಾಜದ ಮುಖ್ಯವಾಹಿನಿಗೆ ಬರಲಿ ವಿಶೇಷ ಚೇತನರ ಪ್ರತಿಭೆ ಮತ್ತು ಸಾಮರ್ಥ-'ವನ್ನು ಗುರುತಿಸಿ ಅವರಿಗೆ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯೋಗ ಹಾಗೂ ಸ್ವಯಂ ಉದ್ಯೋಗದ ಅವಕಾಶಗಳನ್ನು ಹೆಚ್ಚಿಸಬೇಕಾಗಿದೆ. ಸರ್ಕಾರದ ಯೋಜನೆಗಳ ಜೊತೆಗೆ ಸಮಾಜವೂ ಅವರ ಬೆಂಬಲಕ್ಕೆ ನಿಲ್ಲಬೇಕು. ಸಾರ್ವಜನಿಕ ಸ್ಥಳಗಳು ಮತ್ತು ಸರ್ಕಾರಿ ಸೇವೆಗಳು ವಿಶೇಷ ಚೇತನರಿಗೆ ಸುಲಭವಾಗಿ ಲಭ್ಯವಾಗುವಂತೆ ಅಗತ್ಯ ಮೂಲಸೌಕರ್ಯ ಕಲ್ಪಿಸುವತ್ತಲೂ ಗಮನಹರಿಸಬೇಕು ಎಂದರು.

"ವಿಶೇಷ ಚೇತನರ ಮುಖದಲ್ಲಿ ಆತ್ಮವಿಶ್ವಾಸ ಮೂಡಿಸುವುದು, ಅವರ ಬದುಕಿಗೆ ಸ್ವಾತಂತ್ರ್ಯ ನೀಡುವುದು ಮತ್ತು ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವುದು ನಮ್ಮೆಲ್ಲರ ಜವಾಬ್ದಾರಿ. ಅವರ ಬದುಕಿನಲ್ಲಿ ಸಣ್ಣ ಸಹಾಯವೂ ದೊಡ್ಡ ಬದಲಾವಣೆಗೆ ಕಾರಣವಾಗಬಹುದು" ಎಂದು ಅವರು ಹೇಳಿದರು.

ಫಲಾನುಭವಿಗಳಿಗೆ ಶುಭ ಹಾರೈಕೆ 5 ಫಲಾನುಭವಿಗಳಿಗೆ ತ್ರಿಚಕ್ರ ವಾಹನಗಳನ್ನು ಹಸ್ತಾಂತರಿಸಿದ ಬಸನಗೌಡ ಬಾದರ್ಲಿ, ಈ ವಾಹನಗಳನ್ನು ಉತ್ತಮವಾಗಿ ಬಳಸಿಕೊಂಡು ತಮ್ಮ ಜೀವನದಲ್ಲಿ ಹೊಸ ಹೆಜ್ಜೆ ಇಡಬೇಕು ಎಂದು ಶುಭ ಹಾರೈಸಿದರು.

"ನಿಮ್ಮ ಮುಂದಿನ ಬದುಕಿಗೆ ಈ ವಾಹನಗಳು ಆತ್ಮವಿಶ್ವಾಸ, ಸ್ವಾತಂತ್ರ್ಯ ಮತ್ತು ಹೊಸ ಅವಕಾಶಗಳನ್ನು ನೀಡಲಿ. ನಿಮ್ಮ ಕನಸುಗಳನ್ನು ನನಸಾಗಿಸಿಕೊಳ್ಳುವ ಪ್ರಯಾಣಕ್ಕೆ ಇದು ಸಹಕಾರಿಯಾಗಲಿ. ಸ್ವಾಭಿಮಾನದಿಂದ, ಸ್ವಾವಲಂಬನೆಯಿಂದ ಬದುಕು ಕಟ್ಟಿಕೊಳ್ಳುವಂತಾಗಲಿ" ಎಂದು ಹಾರೈಸಿದರು. ಈ ಸಂದರ್ಭದಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ, ಸ್ಥಳೀಯ ಮುಖಂಡರು, ಫಲಾನುಭವಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.ಪ-ರಿಣಾಮಕಾರಿ ಶೀರ್ಷಿಕೆಗಳ ಆಯ್ಕೆಗಳು: "ವಿಶೇಷ ಚೇತನರ ಸ್ವಾಭಿಮಾನಿ ಬದುಕಿಗೆ ಸರ್ಕಾರದ ಸೌಲಭ್ಯಗಳು ಬಲ ತುಂಬಲಿ: ಬಸನಗೌಡ ಬಾದರ್ಲಿ"

"ತ್ರಿಚಕ್ರ ವಾಹನಗಳು ವಿಶೇಷ ಚೇತನರ ಸ್ವಾವಲಂಬನೆಗೆ ಹೊಸ ದಾರಿ: ಬಸನಗೌಡ ಬಾದರ್ಲಿ" "ಸಹಾಯವಲ್ಲ, ಸ್ವಾವಲಂಬನೆಗೆ ಅವಕಾಶ ಕಲ್ಪಿಸುವುದು ನಮ್ಮ ಆಶಯ: ಬಸನಗೌಡ ಬಾದರ್ಲಿ" "ವಿಶೇಷ ಚೇತನರ ಮುಖದಲ್ಲಿ ಆತ್ಮವಿಶ್ವಾಸ ಮೂಡಿಸುವುದು ನಮ್ಮ ಜವಾಬ್ದಾರಿ" "ಸ್ವಾಭಿಮಾನದಿಂದ ಬದುಕು ಕಟ್ಟಿಕೊಳ್ಳಲು ವಿಶೇಷ ಚೇತನರಿಗೆ ನೆರವಾಗೋಣ" "5 ವಿಶೇಷ ಚೇತನ ಫಲಾನುಭವಿಗಳಿಗೆ ತ್ರಿಚಕ್ರ ವಾಹನ ವಿತರಣೆ"

ಸರ್ಕಾರದ ಯೋಜನೆಗಳು ಜನರ ಬದುಕಿಗೆ ಬೆಳಕಾಗಬೇಕು: ಬಸನಗೌಡ ಬಾದರ್ಲಿ

ಸ್ವಾವಲಂಬಿ ಸಾರಥಿ ಯೋಜನೆಯಡಿ 6 ಫಲಾನುಭವಿಗಳಿಗೆ ಕಾರು ವಿತರಣೆ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಸರ್ಕಾರದ ಜನಪರ ಯೋಜನೆಗಳು ಅರ್ಹ ಫಲಾನುಭವಿಗಳ ಬದುಕಿನಲ್ಲಿ ನಿಜವಾದ ಬದಲಾವಣೆ ತರಬೇಕು ಎಂಬ ಆಶಯದೊಂದಿಗೆ ಇಂದು ಸಿಂಧನೂರಿನ ಜನಸ್ಪಂದನ ಕಾರ್ಯಾಲಯದಲ್ಲಿ ಸ್ವಾವಲಂಬಿ ಸಾರಥಿ ಯೋಜನೆಯಡಿ ವಿವಿಧ ನಿಗಮಗಳಿಂದ ಆಯ್ಕೆಯಾದ 6 ಮಂದಿ ಫಲಾನುಭವಿಗಳಿಗೆ ಕಾರುಗಳನ್ನು ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ ಅವರು ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಬಸನಗೌಡ ಬಾದರ್ಲಿ ಅವರು, ಸರ್ಕಾರವು ಸಮಾಜದ ವಿವಿಧ ವರ್ಗಗಳ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳನ್ನು ಜಾರಿಗೊಳಿಸುತ್ತಿದೆ. ಆದ-'ರೆ ಯೋಜನೆಗಳ ಯಶಸ್ಸು ಅವುಗಳನ್ನು ಎಷ್ಟರ ಮಟ್ಟಿಗೆ ಜನರಿಗೆ ತಲುಪಿಸಲಾಗುತ್ತದೆ ಎಂಬುದರ ಮೇಲೆ ಅವಲಂಬಿತವಾಗಿದೆ. ಸರ್ಕಾರದ ಯೋಜನೆಗಳು ಕೇವಲ ಕಡತಗಳಲ್ಲಿ



ಉಳಿಯದೆ, ಅರ್ಹ ಫಲಾನುಭವಿಗಳ ಬದುಕಿಗೆ ತಲುಪಿ, ಅವರ ಸ್ವಾವಲಂಬನೆಗೆ ದಾರಿ ಮಾಡಿಕೊಡಬೇಕು ಎಂಬ ಸಂಕಲ್ಪದೊಂದಿಗೆ ಕಾರ್ಯನಿರ್ವಹಿಸುತ್ತಿದ್ದೇನೆ ಎಂದು ತಿಳಿಸಿದರು.

ಸ್ವಾವಲಂಬಿ ಸಾರಥಿ ಯೋಜನೆಯಡಿ ದೊರೆತಿರುವ ವಾಹನಗಳು ಕೇವಲ ಸಾರಿಗೆ ಸಾಧನಗಳಲ್ಲ. ಅವು ಫಲಾನುಭವಿಗಳ ಉದ್ಯೋಗ, ಆದಾಯ ಮತ್ತು ಆತ್ಮನಿರ್ಭರ ಬದುಕಿಗೆ ಹೊಸ ಅವಕಾಶಗಳನ್ನು ತೆರೆದಿಡುವ ಸಾಧನಗಳಾಗಿವೆ. ಫಲಾನುಭವಿಗಳು ವಾಹನಗಳನ್ನು ಸದುಪಯೋಗಪಡಿಸಿಕೊಂಡು ತಮ್ಮ ಕುಟುಂಬದ ಆರ್ಥಿಕ ಸ್ಥಿತಿಯನ್ನು ಉತ್ತಮಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸ್ವಂತ ದುಡಿಮೆಯಿಂದ ಸ್ವಾಭಿಮಾನದಬದುಕು ಯಾವುದೇ ಕುಟುಂಬವು ಆರ್ಥಿಕವಾಗಿ ಸದೃಢವಾಗಬೇಕಾದರೆ ಸ್ವಂತ ದುಡಿಮೆ ಮತ್ತು ಸ್ವಾವಲಂಬನೆ ಬಹಳ ಮುಖ್ಯ. ಸರ್ಕಾರದ ನೆರವು ಫಲಾನುಭವಿಗಳಿಗೆ ಆರಂಭಿಕ ಬೆಂಬಲ ನೀಡುತ್ತದೆ. ಅದನ್ನು ಸಮರ್ಪಕವಾಗಿ ಬಳಸಿಕೊಂಡು ಸ್ವಂತ ಉದ್ಯೋಗವನ್ನು ಅಭಿವೃದ್ಧಿಪಡಿಸಿ, ತಮ್ಮ ಬದುಕಿನ ಜೊತೆಗೆ ಇತರ-ರಿಗೂ ಉದ್ಯೋಗದ ಅವಕಾಶ ಕಲ್ಪಿಸುವಂತಾಗಬೇಕು ಎಂದು ಬಸನಗೌಡ ಬಾದರ್ಲಿ ಹೇಳಿದರು.

ಸರ್ಕಾರದ ಸೌಲಭ್ಯಗಳು ನಿಜವಾದ ಫಲಾನುಭವಿಗಳಿಗೆ ತಲುಪುವಂತೆ ಸಂಬಂಧಪಟ್ಟ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು. ಅರ್ಹ ಫಲಾನುಭವಿಗಳಿಗೆ ಯೋಜನೆಗಳ ಕುರಿತು ಸಮರ್ಪಕ ಮಾಹಿತಿ ನೀಡಿ, ಅರ್ಜಿ ಸಲ್ಲಿಕೆಯಿಂದ ಹಿಡಿದು ಸೌಲಭ್ಯ ದೊರೆಯುವವರೆಗಿನ ಪ್ರಕ್ರಿಯೆಯಲ್ಲಿ ಅಗತ್ಯ ಮಾರ್ಗದರ್ಶನ ನೀಡಬೇಕು ಎಂದು ಅವರು ತಿಳಿಸಿದರು.

ವಾಹನಗಳುಹೊಸಬದುಕಿನಸಾರಥಿಂ ಯಾಗಲಿ ಇಂದು ವಿತರಿಸಲಾದ ಆರು ಕಾರುಗಳು ಫಲಾನುಭವಿಗಳ ಬದುಕಿನಲ್ಲಿ ಹೊಸ ಅಧ್ಯಾಯಕ್ಕೆ ನಾಂದಿ ಹಾಡಲಿ. ಈ ವಾಹನಗಳು ಅವರ ಸ್ವಾವಲಂಬಿ ಬದುಕಿನ ಹೊಸ ಸಾರಥಿಗಳಾಗಿ, ಕುಟುಂಬದ ಆರ್ಥಿಕ ಪ್ರಗತಿಗೆ ಮತ್ತು ಉತ್ತಮ ಭವಿಷ್ಯ ನಿರ್ಮಾಣಕ್ಕೆ ನೆರವಾಗಲಿ ಎಂದು ಬಸನಗೌಡ ಬಾದರ್ಲಿ ಹಾರೈಸಿದರು. ಸರ್ಕಾರದ ವಿವಿಧ ಜನಪರ ಯೋಜನೆಗಳ ಪ್ರಯೋಜನವನ್ನು ಹೆಚ್ಚಿನ ಸಂಖ್ಯೆಯ ಅರ್ಹ-ರಿಗೆ ತಲುಪಿಸುವ ನಿಟ್ಟಿನಲ್ಲಿ ತಮ್ಮ ಪ್ರಯತ್ನ ಮುಂದುವರಿಯಲಿದೆ. ಜನರ ಸಮಸ್ಯೆಗಳಿಗೆ ಸ್ಪಂದಿಸುವುದು ಮತ್ತು ಸರ್ಕಾರದ ಸೌಲಭ್ಯಗಳನ್ನು ಜನರ ಮನೆಬಾಗಿಲಿಗೆ ತಲುಪಿಸುವುದು ತಮ್ಮ ಆದ್ಯತೆಯಾಗಿದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ವಿವಿಧ ನಿಗಮಗಳ ಅಧಿಕಾರಿಗಳು, ಸಿಬ್ಬಂದಿ, ಜನಪ್ರತಿನಿಧಿಗಳು, ಫಲಾನುಭವಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101